Volume : 9 | Issue : 137 | August : 13 : 2026 : Thursday
ಸಂಪುಟ : 9 | ಸಂಚಿಕೆ : 137 | ಆಗಸ್ಟ್ : 13 : 2026 : ಗುರುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/78



ಸೊಂಟದ ಗಾಯದಿಂದ ರಶ್ಮಿಕಾ ಚಿತ್ರೀಕರಣದಿಂದ ದೂರ ಉಳಿದಿದ್ದು, ವಿಜಯ್ ದೇವರಕೊಂಡ ಅಭಿನಯದ 'ರಣಬಾಲಿ' ಸಿನಿಮಾ ಬಿಡುಗಡೆ ಮುಂದೂಡುವ ಸಾಧ್ಯತೆ ಇದೆ.

ಹೆಬ್ಬಾಳ ಟನಲ್ ಕುರಿತು ಡಿಕೆಶಿಗೆ ತೇಜಸ್ವಿ ಎಚ್ಚರಿಕೆ | ಪುಟ 3

'ಯುಎಪಿಎ ಕೋರ್ಟ್‌ಗೆ ಸೌಲಭ್ಯ ನೀಡಿ' | ಪುಟ 4



■ ಸುದ್ದಿ ಚುಟುಕು

## ಪ್ರಜ್ವಲ್ ಬ್ಯಾರಕ್‌ನಲ್ಲಿ ಮೊಬೈಲ್ ಪತ್ತೆ

● ವಿಕ್ರಮ ವಾಹಿನಿ । ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮೇಲೆ ಕೇಂದ್ರ ಅಪರಾಧ ವಿಭಾಗದ ಪೊಲೀಸರು ನಡೆಸಿದ ದಾಳಿಯಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಲ್ಲಿ ಮೊಬೈಲ್ ಫೋನ್ ಹಾಗೂ ಚಾರ್ಜರ್ ಪತ್ತೆಯಾಗಿದ್ದು, ಜೈಲಿನ ಭದ್ರತಾ ವ್ಯವಸ್ಥೆ ಕುರಿತು ಹಲವು ಪ್ರಶ್ನೆಗಳು ಎದ್ದಿವೆ.

ದಾಳಿ ವೇಳೆ ಜೈಲಿನ ವಿವಿಧೆಡೆ 10ಕ್ಕೂ ಹೆಚ್ಚು ಮೊಬೈಲ್ ಫೋನ್‌ಗಳು ಪತ್ತೆಯಾಗಿವೆ. ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಲ್ಲಿ ದೊರೆತ ಮೊಬೈಲ್‌ನಲ್ಲಿ ಒಟಿಟಿ ಸೇರಿದಂತೆ ಹಲವು ಆಪ್‌ಗಳು ಪತ್ತೆಯಾಗಿದ್ದು, ಜೈಲಿನ ವೈ-ಫೈ ಬಳಸಲಾಗಿದೆಯೇ ಎಂಬುದರ ಬಗ್ಗೆಯೂ ಪರಿಶೀಲನೆ ನಡೆಸಲಾಗುವುದು ಎಂದು ಕಾರಾಗೃಹ ಇಲಾಖೆ ಡಿಜಿಪಿ ಅಲೋಕ್ ಕುಮಾರ್ ತಿಳಿಸಿದ್ದಾರೆ.

ಜೈಲಿನೊಳಗೆ ಅಕ್ರಮವಾಗಿ ಮೊಬೈಲ್‌ಗಳು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಮುಂದಾಗಿರುವುದಾಗಿ ಅವರು ಹೇಳಿದ್ದಾರೆ. ಸಹಾಯಕ ಅಧೀಕ್ಷಕ ಈರಣ್ಣ ಅವರನ್ನು ಅಮಾನತುಗೊಳಿಸಲಾಗಿದ್ದು, ಜೈಲು ಅಧೀಕ್ಷಕ ಅನ್ಸುಕುಮಾರ್ ಅವರಿಗೆ ನೋಟಿಸ್ ನೀಡಿ ವಿವರಣೆ ಕೇಳಲಾಗಿದೆ.

ಜೈಲು ಸಿಬ್ಬಂದಿ ಹಾಗೂ ಅಧಿಕಾರಿಗಳ ಕೈವಾಡ ಕಂಡುಬಂದರೆ ಯಾವುದೇ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು. ಕೈದಿಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಿರುವ ಸರ್ಕಾರದ ಜವಾಬ್ದಾರಿಯನ್ನು ಅಧಿಕಾರಿಗಳು ಪ್ರಾಮಾಣಿಕವಾಗಿ ನಿರ್ವಹಿಸಬೇಕು ಎಂದು ಅಲೋಕ್ ಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಸಿಸಿಬಿ ದಾಳಿ ಮುಗಿದ ಬಳಿಕವೂ ಜೈಲಿನ ಅಧಿಕಾರಿಗಳಿಗೆ ಎರಡು ಮೊಬೈಲ್‌ಗಳು ಪತ್ತೆಯಾಗಿವೆ. ಜೈಲಿನೊಳಗೆ ಇನ್ನೂ ಕೆಲವು ಅಕ್ರಮ ಮೊಬೈಲ್‌ಗಳು ಇರುವ ಸಾಧ್ಯತೆಯಿದ್ದು, ಅವುಗಳ ಪತ್ತೆಗೆ ಪರಿಶೀಲನೆ ಮುಂದುವರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## 3,718 ಮೊಬೈಲ್ ಆಪ್‌ಗಳಿಗೆ ಕೇಂದ್ರದ ನಿರ್ಬಂಧ

● ವಿಕ್ರಮ ವಾಹಿನಿ । ನವದೆಹಲಿ

ಬಳಕೆದಾರರನ್ನು ವಂಚಿಸುತ್ತಿದ್ದ ಅಕ್ರಮ ಸಾಲದ ಆಪ್‌ಗಳು ಸೇರಿದಂತೆ ದೇಶದಲ್ಲಿ 3,718 ಮೊಬೈಲ್ ಆಪ್‌ಗಳನ್ನು ಕೇಂದ್ರ ಸರ್ಕಾರ ನಿರ್ಬಂಧಿಸಿದೆ ಎಂದು ಗೃಹ ವ್ಯವಹಾರಗಳ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಲೋಕಸಭೆಗೆ ತಿಳಿಸಿದ್ದಾರೆ.

ಈ ವರ್ಷದ ಜೂನ್ 30ರವರೆಗೆ ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರದ ಶಿಫಾರಸಿನ ಮೇರೆಗೆ ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ ಈ ಆಪ್‌ಗಳನ್ನು ನಿರ್ಬಂಧಿಸಲಾಗಿದೆ. ಅಕ್ರಮ ಸಾಲದ ಆಪ್‌ಗಳ ಮೂಲಕ ಸಾರ್ವಜನಿಕರನ್ನು ವಂಚಿಸುತ್ತಿರುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಇದರ ಜೊತೆಗೆ ವಿವಿಧ ಪೊಲೀಸ್ ಇಲಾಖೆಗಳ ವರದಿಗಳ ಆಧಾರದ ಮೇಲೆ 15.75 ಲಕ್ಷಕ್ಕೂ ಹೆಚ್ಚು ಮೊಬೈಲ್ ಸಂಪರ್ಕಗಳು ಹಾಗೂ 5.77 ಲಕ್ಷಕ್ಕೂ ಅಧಿಕ ಮೊಬೈಲ್ ಸಾಧನಗಳ ಗುರುತಿನ ಸಂಖ್ಯೆಗಳನ್ನೂ ಕೇಂದ್ರ ಸರ್ಕಾರ ನಿರ್ಬಂಧಿಸಿದೆ ಎಂದು ಮಾಹಿತಿ ನೀಡಿದರು.

ಹಣಕಾಸು ವಂಚನೆಗಳನ್ನು ತಕ್ಷಣ ವರದಿ ಮಾಡುವ ವ್ಯವಸ್ಥೆಯ ಮೂಲಕ ಇದುವರೆಗೆ ರೂ 11,158 ಕೋಟಿಗೂ ಹೆಚ್ಚು ಹಣವನ್ನು ವಂಚನೆಯಿಂದ ರಕ್ಷಿಸಲಾಗಿದೆ.

2021ರಲ್ಲಿ ಆರಂಭವಾದ ಈ ವ್ಯವಸ್ಥೆಯು ಸೈಬರ್ ಹಣಕಾಸು ವಂಚನೆಗಳ ಕುರಿತು ತ್ವರಿತವಾಗಿ ದೂರು ದಾಖಲಿಸಿ, ಹಣದ ವರ್ಗಾವಣೆಯನ್ನು ತಡೆಯಲು ನೆರವಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಸೈಬರ್ ವಂಚನೆಗಳನ್ನು ತಡೆಯಲು ಕೇಂದ್ರ ಸರ್ಕಾರ ಕೈಗೊಂಡಿರುವ ಕ್ರಮಗಳ ಭಾಗವಾಗಿ ಅನುಮಾನಾಸ್ಪದ ಮೊಬೈಲ್ ಸಂಪರ್ಕಗಳು ಹಾಗೂ ಸಾಧನಗಳ ಮೇಲೂ ನಿರಂತರ ನಿಗಾ ಇರಿಸಲಾಗಿದೆ.

ಸಾರ್ವಜನಿಕರು ಅಕ್ರಮ ಸಾಲದ ಆಪ್‌ಗಳು ಹಾಗೂ ಅನುಮಾನಾಸ್ಪದ ಆಪ್‌ಗಳನ್ನು ಬಳಸುವಾಗ ಎಚ್ಚರಿಕೆ ವಹಿಸಿ, ವಂಚನೆಗೊಳಗಾದಲ್ಲಿ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡುವಂತೆ ಸಚಿವರು ಸಲಹೆ ನೀಡಿದ್ದಾರೆ.

# ಅಳೆದು ತೂಗಿ ಸಚಿವರಿಗೆ ಖಾತೆ ಫೈನಲ್

● ವಿಕ್ರಮ ವಾಹಿನಿ । ಬೆಂಗಳೂರು

ಬಹುನಿರೀಕ್ಷಿತ ರಾಜ್ಯ ಸಚಿವ ಸಂಪುಟದ ನೂತನ ಸಚಿವರಿಗೆ ಕೊನೆಗೂ ಖಾತೆ ಹಂಚಿಕೆ ಮಾಡಲಾಗಿದ್ದು, ಅಧಿಕೃತ ಪಟ್ಟಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಬುಧವಾರ ಸಹಿ ಹಾಕಿದ್ದಾರೆ.

ಖಾತೆ ಹಂಚಿಕೆಯಲ್ಲಿ ಕೆಲವು ಪ್ರಮುಖ ಬದಲಾವಣೆಗಳಾಗಿದ್ದು, ಸಚಿವರಾದ ಕೆ.ಎಚ್. ಮುನಿಯಪ್ಪ ಹಾಗೂ ರಾಮಲಿಂಗಾರೆಡ್ಡಿ ಅವರಿಗೆ ಈ ಹಿಂದೆ ನೀಡಲಾಗಿದ್ದ ಖಾತೆಗಳನ್ನು ಬದಲಾಯಿಸಲಾಗಿದೆ.

ಕೆ.ಎಚ್. ಮುನಿಯಪ್ಪ ಅವರಿಗೆ ಈ ಹಿಂದೆ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ನೀಡಲಾಗಿತ್ತು. ಇದೀಗ ಅವರನ್ನು ಸಮಾಜ ಕಲ್ಯಾಣ ಇಲಾಖೆಗೆ ನಿಯೋಜಿಸಲಾಗಿದೆ.

ಸಮಾಜ ಕಲ್ಯಾಣ ಖಾತೆ ನೀಡುವಂತೆ ಮುನಿಯಪ್ಪ ಅವರು ಪಕ್ಷದ ವರಿಷ್ಠರ ಬಳಿ ಮನವಿ ಮಾಡಿದ್ದರು ಎನ್ನಲಾಗಿದೆ. ಮತ್ತೊಂದೆಡೆ, ಜಲಸಂಪನ್ಮೂಲ ಖಾತೆ ನೀಡಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದ ರಾಮಲಿಂಗಾರೆಡ್ಡಿ ಅವರಿಗೆ ಇದೀಗ ಅರಣ್ಯ ಇಲಾಖೆ ವಹಿಸಲಾಗಿದೆ.

ನೂತನ ಖಾತೆ ಹಂಚಿಕೆಯಂತೆ ಲಕ್ಷ್ಮಣ ಸವದಿ ಅವರಿಗೆ ಸಹಕಾರ, ಸಂತೋಷ್ ಲಾಡ್ ಅವರಿಗೆ ಕಾರ್ಮಿಕ, ಯು.ಟಿ. ಖಾದರ್ ಅವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಕ್ಫ್, ಶಿವರಾಜ್ ತಂಗಡಗಿ ಅವರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನೀಡಲಾಗಿದೆ.

ಬಸವರಾಜ ರಾಯರೆಡ್ಡಿ ಅವರಿಗೆ ಉನ್ನತ ಶಿಕ್ಷಣ, ಎಚ್.ಸಿ. ಬಾಲಕೃಷ್ಣ ಅವರಿಗೆ ಪೌರಾಡಳಿತ, ಕೆ.ಎಸ್. ಬಸವಂತಪ್ಪ ಅವರಿಗೆ ಮುಜರಾಯಿ ಮತ್ತು ಮೀನುಗಾರಿಕೆ, ಎನ್. ಚಲುವರಾಯಸ್ವಾಮಿ ಅವರಿಗೆ ಜಲಸಂಪನ್ಮೂಲ ಹಾಗೂ ಮಧು ಬಂಗಾರಪ್ಪ ಅವರಿಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಖಾತೆ ವಹಿಸಲಾಗಿದೆ.

ಎಸ್.ಎಸ್. ಮಲ್ಲಿಕಾರ್ಜುನ್ ಅವರಿಗೆ ಗಣಿ ಮತ್ತು ಭೂವಿಜ್ಞಾನ, ಬಿ. ನಾಗೇಂದ್ರ ಅವರಿಗೆ ಯೋಜನೆ ಮತ್ತು ಸಾಂಖ್ಯಿಕ, ಪಿ.ಎಂ. ನರೇಂದ್ರಸ್ವಾಮಿ ಅವರಿಗೆ ಕೃಷಿ, ಸಿ. ಪುಟ್ಟರಂಗಶೆಟ್ಟಿ ಅವರಿಗೆ ಪಶುಸಂಗೋಪನೆ ಮತ್ತು ರೇಷ್ಮೆ, ಟಿ. ರಘುಮೂರ್ತಿ ಅವರಿಗೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಖಾತೆ ನೀಡಲಾಗಿದೆ.

ರಿಜ್ವಾನ್ ಅರ್ಷದ್ ಅವರಿಗೆ ಆಹಾರ ಮತ್ತು ನಾಗರಿಕ ಪೂರೈಕೆ, ರುದ್ರಪ್ಪ ಲಮಾಣಿ ಅವರಿಗೆ ಸಕ್ಕರೆ ಮತ್ತು ಜವಳಿ, ಶಿವಲಿಂಗೇಗೌಡ ಅವರಿಗೆ ಅಬಕಾರಿ, ವಿಜಯಾನಂದ ಕಾಶಪ್ಪನವರ್ ಅವರಿಗೆ ಸಣ್ಣ ಕೈಗಾರಿಕೆ, ಜಮೀರ್ ಅಹ್ಮದ್ ಖಾನ್ ಅವರಿಗೆ ವಸತಿ ಹಾಗೂ ಅಜಯ್ ಸಿಂಗ್ ಅವರಿಗೆ ಸಣ್ಣ ನೀರಾವರಿ ಮತ್ತು ಐಟಿ-ಬಿಟಿ ಖಾತೆ ಹಂಚಿಕೆ ಮಾಡಲಾಗಿದೆ.

ಖಾತೆ ಹಂಚಿಕೆ ಮೂಲಕ ಹಲವು ದಿನಗಳಿಂದ ನಡೆಯುತ್ತಿದ್ದ ಸಚಿವರ ಅಸಮಾಧಾನ ಹಾಗೂ ಖಾತೆ ಬದಲಾವಣೆ ಕುರಿತ ಚರ್ಚೆಗಳಿಗೆ ತೆರೆ ಬಿದ್ದಂತಾಗಿದೆ. ಜವಾಬ್ದಾರಿಗಳೊಂದಿಗೆ ಸಚಿವರು ತಮ್ಮ ಇಲಾಖೆಗಳ ಆಡಳಿತವನ್ನು ಮುನ್ನಡೆಸಲಿದ್ದಾರೆ.

### ಕೊನೆಗೂ ಖಾತೆ ಹಂಚಿಕೆ; ಥಾವರ್ ಚಂದ್ ಗೆಹ್ಲೋಟ್ ಸಹಿ

- ರಾಮಲಿಂಗಾರೆಡ್ಡಿಗೆ ಅರಣ್ಯ ಖಾತೆ; ಈ ಹಿಂದೆ ಜಲಸಂಪನ್ಮೂಲ ನೀಡಲಾಗಿತ್ತು.
- ಕೆ.ಎಚ್. ಮುನಿಯಪ್ಪಗೆ ಸಮಾಜ ಕಲ್ಯಾಣ, ಎನ್. ಚಲುವರಾಯಸ್ವಾಮಿಗೆ
- ಜಲಸಂಪನ್ಮೂಲ ಖಾತೆ. ಲಕ್ಷ್ಮಣ ಸವದಿಗೆ ಸಹಕಾರ
- ಇಲಾಖೆ, ಸಂತೋಷ್ ಲಾಡ್‌ಗೆ ಕಾರ್ಮಿಕ ಇಲಾಖೆ.
- ಯು.ಟಿ. ಖಾದರ್‌ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವಕ್ಫ್.
- ಮಧು ಬಂಗಾರಪ್ಪಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ.
- ಪಿ.ಎಂ. ನರೇಂದ್ರಸ್ವಾಮಿಗೆ ಕೃಷಿ,
- ಎಸ್.ಎಸ್. ಮಲ್ಲಿಕಾರ್ಜುನ್‌ಗೆ ಗಣಿ ಮತ್ತು ಭೂವಿಜ್ಞಾನ.
- ರಿಜ್ವಾನ್ ಅರ್ಷದ್‌ಗೆ ಆಹಾರ ಮತ್ತು ನಾಗರಿಕ ಪೂರೈಕೆ.
- ಅಜಯ್ ಸಿಂಗ್‌ಗೆ ಸಣ್ಣ ನೀರಾವರಿ ಹಾಗೂ ಐಟಿ-ಬಿಟಿ.
- ಉಳಿದ ಸಚಿವರಿಗೂ ವಿವಿಧ ಪ್ರಮುಖ ಖಾತೆಗಳ ಹಂಚಿಕೆ ಮಾಡಲಾಗಿದೆ.

## ಏನಿರುತ್ತೆ, ಏನಿರಲ್ಲ?

● ವಿಕ್ರಮ ವಾಹಿನಿ । ಬೆಂಗಳೂರು




ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶ ವಿರೋಧಿಸಿ ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ಅವರು ಆಗಸ್ಟ್ 13ರಂದು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಆರಂಭದಲ್ಲಿ ಬಂದ್‌ಗೆ ಬೆಂಬಲ ಘೋಷಿಸಿದ್ದ ಕೆಲವು ಸಂಘಟನೆಗಳು, ರಾಜ್ಯದ ಜಲಾಶಯಗಳಿಗೆ ಒಳಹರಿವು ಹೆಚ್ಚಿರುವುದು ಹಾಗೂ ಸರ್ಕಾರ ರೈತರ ಹಿತ ಕಾಪಾಡುವುದಾಗಿ ಭರವಸೆ ನೀಡಿರುವ ಹಿನ್ನೆಲೆಯಲ್ಲಿ ಇದೀಗ ಬೆಂಬಲ ವಾಪಸ್ ಪಡೆದಿವೆ.

ವಾಟಾಳ್ ನಾಗರಾಜ್ ನೇತೃತ್ವದ ಕನ್ನಡ ಸಂಘಟನೆಗಳ ಒಕ್ಕೂಟ, ಕನ್ನಡ ಸೇನೆ, ಕನ್ನಡ ಜಾಗೃತಿ ವೇದಿಕೆ ಸೇರಿದಂತೆ ಕೆಲವು ಸಂಘಟನೆಗಳು ಬಂದ್‌ಗೆ ಬೆಂಬಲ ನೀಡಿವೆ. ಆದರೆ, ಪ್ರಮುಖ ಸಾರಿಗೆ, ಆಟೋ-ಕ್ಯಾಬ್ ಹಾಗೂ ಕೆಲವು ಕನ್ನಡಪರ ಸಂಘಟನೆಗಳು ಬಂದ್‌ನಿಂದ ದೂರ ಉಳಿದಿವೆ.

**ಬಹುತೇಕ ಸೇವೆಗಳು ಎಂದಿನಂತೆ**

ಬಂದ್‌ಗೆ ವ್ಯಾಪಕ ಬೆಂಬಲ ಇಲ್ಲದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಜನಜೀವನ ಬಹುತೇಕ ಸಹಜವಾಗಿರುವ ನಿರೀಕ್ಷೆಯಿದೆ. ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ನಮ್ಮ ಮೆಟ್ರೋ, ರೈಲು ಸೇವೆಗಳು, ಆಟೋ ಮತ್ತು ಕ್ಯಾಬ್‌ಗಳು ಎಂದಿನಂತೆ ಸಂಚರಿಸುವ ಸಾಧ್ಯತೆಯಿದೆ. ಶಾಲಾ-ಕಾಲೇಜುಗಳು, ಸರ್ಕಾರಿ ಕಚೇರಿಗಳು ಹಾಗೂ ವಾಣಿಜ್ಯ ಚಟುವಟಿಕೆಗಳೂ ಎಂದಿನಂತೆ ನಡೆಯಲಿವೆ.

ಆಸ್ಪತ್ರೆಗಳು, ನರ್ಸಿಂಗ್ ಹೋಂಗಳು, ಮೆಡಿಕಲ್ ಶಾಪ್‌ಗಳು, ಆಂಬ್ಯುಲೆನ್ಸ್ ಸೇರಿದಂತೆ ತುರ್ತು ಆರೋಗ್ಯ ಸೇವೆಗಳಿಗೆ ಯಾವುದೇ ಅಡಚಣೆ ಇರುವುದಿಲ್ಲ.

ದಿನಸಿ ಅಂಗಡಿಗಳು, ಹಾಲು, ತರಕಾರಿ, ಮಾರುಕಟ್ಟೆ, ಬೇಕರಿ, ಹೋಟೆಲ್, ರೆಸ್ಟೋರೆಂಟ್ ಹಾಗೂ ಇತರೆ ಅಗತ್ಯ ಸೇವೆಗಳು ಸಹ ಲಭ್ಯವಿರುವ ನಿರೀಕ್ಷೆಯಿದೆ.

**ನೈತಿಕ ಬೆಂಬಲ ಮಾತ್ರ**

ಖಾಸಗಿ ಶಾಲೆಗಳ ಸಂಘಟನೆಗಳಾದ ಕ್ಯಾಮ್ಸ್ ಹಾಗೂ ರುಪ್ಸಾ, ಖಾಸಗಿ ಬಸ್ ಸಂಘಟನೆಗಳು, ಹೋಟೆಲ್ ಮಾಲೀಕರ ಸಂಘ ಹಾಗೂ ಕೆಲವು ಖಾಸಗಿ ಆಸ್ಪತ್ರೆಗಳ ಸಂಘಟನೆಗಳು ಬಂದ್‌ಗೆ ನೈತಿಕ ಬೆಂಬಲ ನೀಡಿವೆ. ಆದರೆ, ಸಂಪೂರ್ಣ ಬಂದ್‌ನಲ್ಲಿ ಭಾಗವಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿವೆ.

ಇನ್ನೊಂದೆಡೆ, ಕರವೇ ಪ್ರವೀಣ್ ಶೆಟ್ಟಿ ಬಣ, ಶಿವರಾಮೇಗೌಡ ಬಣ, ನಾರಾಯಣಗೌಡ ಬಣ, ಬಿಎಂಟಿಸಿ, ಕೆಎಸ್‌ಆರ್‌ಟಿಸಿ ಹಾಗೂ ಆಟೋ-ಕ್ಯಾಬ್ ಸಂಘಟನೆಗಳು ಬಂದ್‌ಗೆ ಬೆಂಬಲ ನೀಡಿಲ್ಲ.

**ವಾಟಾಳ್ ನಾಗರಾಜ್ ಅಸಮಾಧಾನ**

ಕೆಲ ಸಂಘಟನೆಗಳು ಕೊನೆಯ ಕ್ಷಣದಲ್ಲಿ ಬೆಂಬಲ ವಾಪಸ್ ಪಡೆದಿರುವುದಕ್ಕೆ ವಾಟಾಳ್ ನಾಗರಾಜ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. 2ನೇ ಪುಟಕ್ಕೆ..

## ಮಂಕಾಳ ವೈದ್ಯಗೆ ಉಪ ಸಭಾಪತಿ ಹುದ್ದೆ

● ವಿಕ್ರಮ ವಾಹಿನಿ । ಬೆಂಗಳೂರು



ಸಚಿವ ಸ್ಥಾನ ಕೈತಪ್ಪಿದ್ದರಿಂದ ಅಸಮಾಧಾನಗೊಂಡಿದ್ದ ಮಾಜಿ ಸಚಿವ ಹಾಗೂ ಕಾಂಗ್ರೆಸ್ ಶಾಸಕ ಮಂಕಾಳ ವೈದ್ಯ ಅವರಿಗೆ ಕೊನೆಗೂ ಪ್ರಮುಖ ಜವಾಬ್ದಾರಿ ನೀಡಲಾಗಿದೆ. ಅವರನ್ನು ವಿಧಾನಸಭೆಯ ಉಪ ಸಭಾಪತಿಯಾಗಿ ನೇಮಕ ಮಾಡಲಾಗಿದ್ದು, ಈ ಹಿಂದೆ ಉಪ ಸಭಾಪತಿ ಸ್ಥಾನಕ್ಕೆ ಆಯ್ಕೆಯಾಗಿದ್ದ ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್. ಪೊನ್ನಣ್ಣ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ನಿರೀಕ್ಷೆಯಲ್ಲಿದ್ದ ಮಂಕಾಳ ವೈದ್ಯ ಅವರಿಗೆ ಅವಕಾಶ ಸಿಗದ ಹಿನ್ನೆಲೆಯಲ್ಲಿ ಅಸಮಾಧಾನ ವ್ಯಕ್ತವಾಗಿತ್ತು. ಇದೀಗ ಅವರ ಅಸಮಾಧಾನವನ್ನು ತಣಿಸುವ ನಿಟ್ಟಿನಲ್ಲಿ ವಿಧಾನಸಭೆಯ ಉಪ ಸಭಾಪತಿ ಸ್ಥಾನ ನೀಡಲಾಗಿದೆ ಎನ್ನಲಾಗಿದೆ.

ಮತ್ತೊಂದೆಡೆ, ಕೊಡಗು ಜಿಲ್ಲೆಯ ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್. ಪೊನ್ನಣ್ಣ ಅವರಿಗೆ ಈ ಹಿಂದೆ ವಿಧಾನಸಭೆಯ ಉಪ ಸಭಾಪತಿ ಸ್ಥಾನ ನೀಡಲು ನಿರ್ಧರಿಸಲಾಗಿತ್ತು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅವಧಿಯಲ್ಲಿ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾಗಿ ಕಾರ್ಯನಿರ್ವಹಿಸಿದ್ದ ಪೊನ್ನಣ್ಣ ಅವರು, ಇತ್ತೀಚಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ನಿರೀಕ್ಷಿಸಿದ್ದರು. ಆದರೆ ಸಚಿವ ಸ್ಥಾನ ದೊರೆಯದ ಹಿನ್ನೆಲೆಯಲ್ಲಿ ಅವರನ್ನು ಉಪ ಸಭಾಪತಿ ಸ್ಥಾನಕ್ಕೆ ಆಯ್ಕೆ ಮಾಡಲಾಗಿತ್ತು.

ಇದೀಗ ಆ ನಿರ್ಧಾರದಲ್ಲಿ ಬದಲಾವಣೆ ಮಾಡಲಾಗಿದ್ದು, ಪೊನ್ನಣ್ಣ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ. ಅವರಿಗೆ ಸಂಪುಟ ದರ್ಜೆಯ ಸ್ಥಾನಮಾನ ನೀಡಲಾಗಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆದೇಶದ ಮೇರೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಪೊನ್ನಣ್ಣ ಅವರ ನೇಮಕಕ್ಕೆ ಅನುಮೋದನೆ ನೀಡಿ ಆದೇಶ ಹೊರಡಿಸಿದ್ದಾರೆ.

ಉಪ ಸಭಾಪತಿ ಸ್ಥಾನಕ್ಕೆ ಮಂಕಾಳ ವೈದ್ಯ ಅವರನ್ನು ನೇಮಕ ಮಾಡುವ ಮೂಲಕ ಕಾಂಗ್ರೆಸ್ ಪಕ್ಷದೊಳಗಿನ ಅಸಮಾಧಾನ ಶಮನಕ್ಕೆ ಸರ್ಕಾರ ಮುಂದಾಗಿದೆ ಎನ್ನಲಾಗಿದೆ.

## ವರ್ಮಾ ವಿರುದ್ಧದ 3 ಆರೋಪಗಳು ಸಾಬೀತು



● ವಿಕ್ರಮ ವಾಹಿನಿ । ನವದೆಹಲಿ

ದೆಹಲಿಯ ಸರ್ಕಾರಿ ನಿವಾಸದ ಸ್ಟೋರ್‌ರೂಮ್‌ನಲ್ಲಿ ಭಾರಿ ಪ್ರಮಾಣದ ನಗದು ಪತ್ತೆಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಯಶವಂತ್ ವರ್ಮಾ ವಿರುದ್ಧದ ಮೂರು ಆರೋಪಗಳು ಸಾಬೀತಾಗಿವೆ ಎಂದು ಸಂಸದೀಯ ತನಿಖಾ ಸಮಿತಿ ತಿಳಿಸಿದೆ.

2025ರ ಮಾರ್ಚ್‌ನಲ್ಲಿ ವರ್ಮಾ ಅವರ ಅಧಿಕೃತ ನಿವಾಸದ ಸ್ಟೋರ್‌ರೂಮ್‌ನಲ್ಲಿ ಬೆಂಕಿ ಕಾಣಿಸಿಕೊಂಡ ಬಳಿಕ, ಅರ್ಧ ಸುಟ್ಟ ಹಾಗೂ ಒದ್ದೆಯಾದ 500 ಮುಖಬೆಲೆಯ ನೋಟುಗಳ ಕಟ್ಟುಗಳು ಪತ್ತೆಯಾಗಿದ್ದವು. ನಗದಿನ ನಿಖರ ಮೊತ್ತವನ್ನು ಎಣಿಕೆ ಮಾಡದ ಕಾರಣ ನಿರ್ಧರಿಸಲು ಸಾಧ್ಯವಾಗಿಲ್ಲ ಎಂದು ಸಮಿತಿ ಹೇಳಿದೆ.

ವರ್ಮಾ ಅವರ ಮೇಲಿನ ಮೊದಲ ಆರೋಪ, ಪತ್ತೆಯಾದ ಭಾರಿ ಪ್ರಮಾಣದ ನಗದಿನ ಮೂಲದ ಬಗ್ಗೆ ತೃಪ್ತಿಕರ ವಿವರಣೆ ನೀಡದಿರುವುದು. 2ನೇ ಪುಟಕ್ಕೆ..

## ಇಂದಿನಿಂದ ಅಧಿವೇಶನ: ವಾಗ್ವಾದಕ್ಕೆ ಅಖಾಡ ಸಿದ್ಧ


● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದ ಅವಧಿಯಲ್ಲಿ ನಡೆಯುತ್ತಿರುವ ಮಹತ್ವದ ವಿಧಾನಮಂಡಲ ಅಧಿವೇಶನಕ್ಕೆ ಕ್ಷಣಗಣನೆ ಆರಂಭವಾಗಿದೆ. ಆಗಸ್ಟ್ 13ರಿಂದ ಆರಂಭವಾಗಲಿರುವ ಅಧಿವೇಶನದಲ್ಲಿ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷಗಳ ನಡುವೆ ತೀವ್ರ ವಾಕ್ಸಮರ ನಡೆಯುವ ಸಾಧ್ಯತೆಯಿದೆ.

ಸಚಿವ ಸಂಪುಟ ವಿಸ್ತರಣೆ ಮತ್ತು ಖಾತೆ ಹಂಚಿಕೆ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶನ ಇದಾಗಿರುವುದರಿಂದ ಸರ್ಕಾರದ ಆಡಳಿತ, ಸಚಿವರ ಕಾರ್ಯವೈಖರಿ ಹಾಗೂ ಇತ್ತೀಚಿನ ರಾಜಕೀಯ ಬೆಳವಣಿಗೆಗಳ ಕುರಿತು ಪ್ರತಿಪಕ್ಷಗಳು ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳಲು ಸಜ್ಜಾಗಿವೆ. ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಕಾವೇರಿ ನೀರು, ರೈತರ ಸಮಸ್ಯೆ, ಭ್ರಷ್ಟಾಚಾರ, ಸರ್ಕಾರಿ ನೇಮಕಾತಿಯಲ್ಲಿನ ಅಕ್ರಮ, ಕಾನೂನು ಸುವ್ಯವಸ್ಥೆ, ಅಭಿವೃದ್ಧಿ ಕಾಮಗಾರಿಗಳ ನಿಧಾನಗತಿ ಸೇರಿದಂತೆ ಹಲವು ವಿಚಾರಗಳನ್ನು ಪ್ರಸ್ತಾಪಿಸುವ ಸಾಧ್ಯತೆಯಿದೆ. ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಮತ್ತು ಪರೀಕ್ಷಾ ಪ್ರಕ್ರಿಯೆ ಕುರಿತು ಕೇಳಿಬಂದಿರುವ ಆರೋಪಗಳು ಅಧಿವೇಶನದಲ್ಲಿ ಪ್ರತಿಧ್ವನಿಸುವ ಸಾಧ್ಯತೆಯಿದೆ. ಪರೀಕ್ಷಾ ಅಕ್ರಮ, ನೇಮಕಾತಿ ಪ್ರಕ್ರಿಯೆಯಲ್ಲಿನ ಪಾರದರ್ಶಕತೆ ಹಾಗೂ ಅಭ್ಯರ್ಥಿಗಳ ಹಿತಾಸಕ್ತಿಯ ಕುರಿತು ಸರ್ಕಾರದಿಂದ ಸ್ಪಷ್ಟನೆ ಕೇಳಲು ಪ್ರತಿಪಕ್ಷಗಳು ಸಿದ್ಧವಾಗಿವೆ. 2ನೇ ಪುಟಕ್ಕೆ..

# ಕೆಪಿಎಸ್‌ಸಿಯಲ್ಲಿ ಅಧಿಕಾರಿಗಳ ಎತ್ತಂಗಡಿ

● ವಿಕ್ರಮ ವಾಹಿನಿ । ಬೆಂಗಳೂರು




**ಕೆಪಿಎಸ್‌ಸಿ ನೇಮಕಾತಿ ಪ್ರಕ್ರಿಯೆ ಕುರಿತು ಅಕ್ರಮದ ಆರೋಪಗಳು ಕೇಳಿಬಂದ ಬೆನ್ನಲ್ಲೇ ರಾಜ್ಯ ಸರ್ಕಾರ ಆಯೋಗದಲ್ಲಿ ಮಹತ್ವದ ಆಡಳಿತಾತ್ಮಕ ಬದಲಾವಣೆ ಮಾಡಿದೆ. ಪರೀಕ್ಷಾ ನಿಯಂತ್ರಕ ಹುದ್ದೆಯಿಂದ ದಿಗ್ವಿಜಯ್ ಬೋಡ್ಕೆ ವರ್ಗಾವಣೆಯಾಗಿದ್ದು, ಎಚ್. ಪ್ರಸನ್ನ ಅವರಿಗೆ ಹೆಚ್ಚುವರಿ ಜವಾಬ್ದಾರಿ ನೀಡಲಾಗಿದೆ. ಯಾದಗಿರಿ ಜಿಪಂ ಸಿಇಒ ಲವೀಶ್ ಓರ್ಡಿಯಾ ಅವರನ್ನು ಕೆಪಿಎಸ್‌ಸಿ ಜಂಟಿ ಪರೀಕ್ಷಾ ನಿಯಂತ್ರಕರಾಗಿ ನೇಮಕ ಮಾಡಲಾಗಿದೆ.**

ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ನೇಮಕಾತಿ ಹಾಗೂ ಪರೀಕ್ಷಾ ಪ್ರಕ್ರಿಯೆಗಳ ಕುರಿತು ಸಾಲು ಸಾಲು ಆರೋಪಗಳು ಕೇಳಿಬಂದಿರುವ ಬೆನ್ನಲ್ಲೇ ರಾಜ್ಯ ಸರ್ಕಾರ ಆಯೋಗದಲ್ಲಿ ಮಹತ್ವದ ಆಡಳಿತಾತ್ಮಕ ಬದಲಾವಣೆ ಮಾಡಿದೆ. ಇಬ್ಬರು ಐಎಎಸ್ ಅಧಿಕಾರಿಗಳನ್ನು ಕೆಪಿಎಸ್‌ಸಿಯ ಪ್ರಮುಖ ಹುದ್ದೆಗಳಿಗೆ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಇತ್ತೀಚಿನ ನೇಮಕಾತಿ ಪ್ರಕ್ರಿಯೆಗಳಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಉದ್ಯೋಗಾಕಾಂಕ್ಷಿಗಳು ಪ್ರತಿಭಟನೆ ನಡೆಸಿ, ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹಾಗೂ ಕಟ್ಟುನಿಟ್ಟಿನ ಕ್ರಮಕ್ಕೆ ಆಗ್ರಹಿಸಿದ್ದರು. ಇದರ ಬೆನ್ನಲ್ಲೇ ಸರ್ಕಾರ ಕೆಪಿಎಸ್‌ಸಿಯ ಪ್ರಮುಖ ಹುದ್ದೆಗಳ ಜವಾಬ್ದಾರಿಯಲ್ಲಿ ಬದಲಾವಣೆ ಮಾಡಿರುವುದು ಗಮನ ಸೆಳೆದಿದೆ.

ಈ ಹಿಂದೆ ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕರಾಗಿ ಕಾರ್ಯನಿರ್ವಹಿಸುತ್ತಿದ್ದ ದಿಗ್ವಿಜಯ್ ಬೋಡ್ಕೆ ಅವರನ್ನು ಯಾವುದೇ ಪರ್ಯಾಯ ಹುದ್ದೆ ನೀಡದೆ ವರ್ಗಾವಣೆ ಮಾಡಲಾಗಿದೆ. ತೆರವಾದ ಪರೀಕ್ಷಾ ನಿಯಂತ್ರಕ ಹುದ್ದೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ಅವರಿಗೆ ಹೆಚ್ಚುವರಿ ಜವಾಬ್ದಾರಿ ವಹಿಸಲಾಗಿದೆ.

ಇದೇ ವೇಳೆ ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಐಎಎಸ್ ಅಧಿಕಾರಿ ಲವೀಶ್ ಓರ್ಡಿಯಾ ಅವರನ್ನು ಕೆಪಿಎಸ್‌ಸಿಯ ಜಂಟಿ ಪರೀಕ್ಷಾ ನಿಯಂತ್ರಕರನ್ನಾಗಿ ನೇಮಕ ಮಾಡಲಾಗಿದೆ. ಈ ವರ್ಗಾವಣೆ ಹಾಗೂ ನೇಮಕಾತಿ ತಕ್ಷಣದಿಂದಲೇ ಜಾರಿಗೆ ಬರಲಿದೆ ಎಂದು ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಕೆಪಿಎಸ್‌ಸಿಯ ಪರೀಕ್ಷೆ ಮತ್ತು ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆ ಕಾಪಾಡುವುದು ಹಾಗೂ ಆಡಳಿತಾತ್ಮಕ ಕಾರ್ಯವೈಖರಿಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಈ ಬದಲಾವಣೆ ಮಾಡಲಾಗಿದೆ ಎಂದು ಸರ್ಕಾರದ ಕ್ರಮದಿಂದ ತಿಳಿದುಬಂದಿದೆ.

ಸರ್ಕಾರದ ಆದೇಶದಂತೆ ಪರೀಕ್ಷಾ ನಿಯಂತ್ರಕ ಹಾಗೂ ಜಂಟಿ ಪರೀಕ್ಷಾ ನಿಯಂತ್ರಕ ಹುದ್ದೆಗಳನ್ನು ಪೌರಾಡಳಿತ ನಿರ್ದೇಶಕರ ಹುದ್ದೆಗೆ ಸಮಾನವೆಂದು ಪರಿಗಣಿಸಲಾಗಿದೆ. ಹೊಸ ಅಧಿಕಾರಿಗಳ ನೇಮಕದೊಂದಿಗೆ ಕೆಪಿಎಸ್‌ಸಿಯ ಮುಂದಿನ ಪರೀಕ್ಷಾ ಹಾಗೂ ನೇಮಕಾತಿ ಪ್ರಕ್ರಿಯೆಗಳು ಮತ್ತಷ್ಟು ಕಟ್ಟುನಿಟ್ಟಿನ ಮೇಲ್ವಿಚಾರಣೆಯಲ್ಲಿ ನಡೆಯುವ ನಿರೀಕ್ಷೆ ಮೂಡಿದೆ.

ಕೆಪಿಎಸ್‌ಸಿ ನೇಮಕಾತಿ ಪ್ರಕ್ರಿಯೆ ಬಗ್ಗೆ ಉದ್ಯೋಗಾಕಾಂಕ್ಷಿಗಳಲ್ಲಿ ಮೂಡಿರುವ ಅನುಮಾನಗಳಿಗೆ ತೆರೆ ಎಳೆಯುವ ನಿಟ್ಟಿನಲ್ಲಿ ಸರ್ಕಾರದ ಈ ಕ್ರಮ ಮಹತ್ವ ಪಡೆದಿದೆ. ಹೊಸ ಅಧಿಕಾರಿಗಳ ನೇಮಕದ ಬಳಿಕ ಪರೀಕ್ಷಾ ಅಕ್ರಮಗಳಿಗೆ ಕಡಿವಾಣ ಹಾಕಿ, ನೇಮಕಾತಿ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸುವ ಹೊಣೆಗಾರಿಕೆ ಹೆಚ್ಚಾಗಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಜಗತ್ತಿನಲ್ಲಿ ಎಂಥವರೇ ಆಗಿರಲಿ ರೋಗ, ದುಃಖ, ಮುಪ್ಪು, ಮತ್ತು ಸಾವು, ಈ ನಾಲ್ಕರಿಂದ ತಪ್ಪಿಸಿಕೊಳ್ಳಲು * ಯಾರಿಗೂ ಸಾಧ್ಯವಿಲ್ಲ ..! ಇದು ತತ್ವಜ್ಞಾನವಲ್ಲ ಪ್ರಕೃತಿ ಸತ್ಯ.

### ದಿನ ಪಂಚಾಂಗ

ಆಗಸ್ಟ್, 13–2026 ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ. ಪಾಡ್ಯ ತಿಥಿ ರಾ–9:49
ಆಶ್ಲೇಷ ನಕ್ಷತ್ರ ಬೆ–7:52
ರಾಹುಕಾಲ ಮ–1:58–3:32
ಶ್ರಾವಣಮಾಸ ಪ್ರಾರಂಭ, ಎಡಚರ ದಿನ, ಸಪ್ತ ಪರಮಸ್ಥಾನ ವ್ರತಾರಂಭ, ಇರುವತ್ಥೆಂಟಂ ಪೆರಕ್, ಗೋಪಾಲ ಒಡೆಯರ ಆರಾಧನೆ, ಇಳಕಲ್ಲ ವಿಜಯಮಾಹಾಂತೇಶ್ವರ ಮಹೋತ್ಸವ, ಗೋಪಾಲ ಒಡೆಯರ ಆರಾಧನೆ, ಬಾದಾಮಿ । ಹೊಸೂರು ರಾಚಮ್ಮದೇವಿ ಉತ್ಸವ, ಹುಲುಗನಮರಡಿ ಜಾತ್ರೆ

### ಆರೋಗ್ಯ

# ಸಕ್ಕರೆ ತಿಂದರೆ ಆಸಿಡಿಟಿ ಹೆಚ್ಚುತ್ತಾ?



ಊಟದ ಬಳಿಕ ಎದೆ ಉರಿ, ಹುಳಿ ತೇಗು, ಹೊಟ್ಟೆ ಉಬ್ಬರ ಹಾಗೂ ಬಾಯಿಯಲ್ಲಿ ಹುಳಿ ಅಥವಾ ಕಹಿ ರುಚಿ ಕಾಣಿಸಿಕೊಳ್ಳುವುದು ಸಾಮಾನ್ಯವಾಗಿದೆ. ಮಸಾಲೆ, ಎಣ್ಣೆಯುಕ್ತ ಹಾಗೂ ಖಾರವಾದ ಆಹಾರಗಳಿಂದ ಮಾತ್ರ ಆಸಿಡಿಟಿ ಉಂಟಾಗುತ್ತದೆ ಎಂಬುದು ಹಲವರ ನಂಬಿಕೆ. ಆದರೆ ಹೆಚ್ಚು ಸಿಹಿ ತಿನ್ನುವುದರಿಂದಲೂ ಈ ಸಮಸ್ಯೆ ಹೆಚ್ಚಾಗಬಹುದೇ ಎಂಬ ಪ್ರಶ್ನೆ ಅನೇಕರಲ್ಲಿದೆ. ತಜ್ಞರ ಪ್ರಕಾರ, ಸಕ್ಕರೆ ಮಾತ್ರವೇ ಆಸಿಡ್ ರಿಫ್ಲಕ್ಸ್‌ಗೆ ನೇರ ಕಾರಣ ಎಂದು ಹೇಳಲು ಸಾಧ್ಯವಿಲ್ಲ. ಆದರೆ ಹೆಚ್ಚು ಸಕ್ಕರೆ, ಕೊಬ್ಬು ಹಾಗೂ ಕ್ಯಾಲೊರಿ ಹೊಂದಿರುವ ಆಹಾರಗಳನ್ನು ಅತಿಯಾಗಿ ಸೇವಿಸುವುದರಿಂದ ಕೆಲವರಲ್ಲಿ ಸಮಸ್ಯೆ ಉಲ್ಬಣಿಸಬಹುದು.

ಗ್ಯಾಸ್ಟ್ರೋಎಂಟರಾಲಜಿ ಮತ್ತು ಹೆಪಟಾಲಜಿ ತಜ್ಞ ಡಾ. ಜತೀಂದರ್ ಸಿಂಗ್ ಭೋಗಲ್ ಅವರ ಪ್ರಕಾರ, ಕೇವಲ ಸಕ್ಕರೆ ಸೇವನೆಯಿಂದಲೇ ಆಸಿಡಿಟಿ ಉಂಟಾಗುತ್ತದೆ ಎಂಬುದಕ್ಕೆ ನೇರ ಸಂಬಂಧವಿಲ್ಲ. ಆದರೆ ಕೇಕ್, ಪೇಸ್ಟ್ರಿ, ಚಾಕೊಲೇಟ್, ಐಸ್‌ಕ್ರೀಂ, ಸಿಹಿ ಪಾನೀಯಗಳು ಸೇರಿದಂತೆ ಹಲವು ಸಿಹಿ ಆಹಾರಗಳಲ್ಲಿ ಸಕ್ಕರೆಯ ಜತೆಗೆ ಕೊಬ್ಬು ಮತ್ತು ಕ್ಯಾಲೊರಿಗಳ ಪ್ರಮಾಣವೂ ಹೆಚ್ಚಿರುತ್ತದೆ. ಇವುಗಳನ್ನು ಪದೇಪದೇ ಅಥವಾ ಹೆಚ್ಚಿನ ಪ್ರಮಾಣದಲ್ಲಿ ಸೇವಿಸುವುದರಿಂದ ಕೆಲವರಲ್ಲಿ ಎದೆ ಉರಿ ಮತ್ತು ಆಸಿಡ್ ರಿಫ್ಲಕ್ಸ್ ಹೆಚ್ಚಾಗಬಹುದು.

ಹೊಟ್ಟೆ ಹಾಗೂ ಆಹಾರನಾಳದ ನಡುವಿನ ಕೆಳಭಾಗದಲ್ಲಿ ಒಂದು ಸ್ನಾಯು ಇರುತ್ತದೆ. ಇದನ್ನು ಕೆಳಗಿನ ಆಹಾರನಾಳದ ಸ್ನಾಯು ಎಂದು ಕರೆಯಲಾಗುತ್ತದೆ. ಇದು ಸರಿಯಾಗಿ ಮುಚ್ಚಿಕೊಳ್ಳದಿದ್ದಾಗ ಹೊಟ್ಟೆಯಲ್ಲಿರುವ ಆಮ್ಲ ಆಹಾರನಾಳಕ್ಕೆ ಮೇಲಕ್ಕೆ ಬಂದು ಎದೆ ಉರಿ, ಹುಳಿ ತೇಗು ಹಾಗೂ ಬಾಯಿಯಲ್ಲಿ ಹುಳಿ ಅಥವಾ ಕಹಿ ರುಚಿಯಂತಹ ಲಕ್ಷಣಗಳನ್ನು ಉಂಟುಮಾಡುತ್ತದೆ.

ಹೆಚ್ಚು ಸಿಹಿ ಮತ್ತು ಕೊಬ್ಬಿನ ಆಹಾರ ಸೇವನೆಯಿಂದ ತೂಕ ಹೆಚ್ಚಾಗುವ ಸಾಧ್ಯತೆಯೂ ಇದೆ. ವಿಶೇಷವಾಗಿ ಹೊಟ್ಟೆಯ ಸುತ್ತ ಕೊಬ್ಬು ಹೆಚ್ಚಾದಾಗ ಹೊಟ್ಟೆಯ ಮೇಲೆ ಒತ್ತಡ ಉಂಟಾಗಿ ಆಮ್ಲ ಮೇಲಕ್ಕೆ ಬರುವ ಸಾಧ್ಯತೆ ಹೆಚ್ಚಬಹುದು. ಹೀಗಾಗಿ ಆಸಿಡಿಟಿಗೆ ಸಕ್ಕರೆ ಮಾತ್ರವಲ್ಲದೆ ಒಟ್ಟಾರೆ ಆಹಾರ ಪದ್ಧತಿ, ದೇಹದ ತೂಕ ಮತ್ತು ಜೀವನಶೈಲಿಯೂ ಪ್ರಮುಖ ಕಾರಣಗಳಾಗಿವೆ.

ಆಸಿಡಿಟಿ ಸಮಸ್ಯೆ ಕಡಿಮೆ ಮಾಡಲು ಒಂದೇ ಬಾರಿಗೆ ಹೆಚ್ಚಿನ ಪ್ರಮಾಣದ ಆಹಾರ ಸೇವಿಸುವುದನ್ನು ತಪ್ಪಿಸುವುದು ಉತ್ತಮ. ಊಟ ಮಾಡಿದ ತಕ್ಷಣ ಮಲಗದೆ ಕನಿಷ್ಠ ಎರಡುರಿಂದ ಮೂರು ಗಂಟೆಗಳ ಅಂತರ ಕಾಯ್ದುಕೊಳ್ಳಬೇಕು. ಸಿಹಿ ಅಥವಾ ನಿರ್ದಿಷ್ಟ ಆಹಾರ ಸೇವಿಸಿದ ನಂತರವೇ ಎದೆ ಉರಿ ಹೆಚ್ಚಾಗುತ್ತಿದ್ದರೆ ಅದರ ಪ್ರಮಾಣವನ್ನು ಕಡಿಮೆ ಮಾಡಬಹುದು.

ಪದೇಪದೇ ಎದೆ ಉರಿ ಕಾಣಿಸಿಕೊಳ್ಳುತ್ತಿದ್ದರೆ ಅಥವಾ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿದರೂ ಸಮಸ್ಯೆ ಮುಂದುವರಿದರೆ ವೈದ್ಯರನ್ನು ಸಂಪರ್ಕಿಸುವುದು ಅಗತ್ಯ. ತೀವ್ರ ಅಥವಾ ನಿರಂತರ ಎದೆನೋವನ್ನು ಕೇವಲ ಆಸಿಡಿಟಿ ಎಂದು ನಿರ್ಲಕ್ಷಿಸದೆ ವೈದ್ಯಕೀಯ ಸಲಹೆ ಪಡೆಯುವುದು ಸೂಕ್ತ.

# ಕ್ಷಮೆ ಎಂಬ ಔದಾರ್ಯಕ್ಕೆ ತೆರಬೇಕಾದ ಬೆಲೆ ಏನು?

ಶತ್ರುವಿಗೆ ತೋರುವ ಕ್ಷಮೆ ಎನ್ನುವುದು ಉದಾರತೆಯಲ್ಲ, ಅದು ಕೆಲವೊಮ್ಮೆ ಸ್ವಂತ ಕತ್ತನ್ನು ತಾನೇ ಶತ್ರುವಿನ ಕೈಗೆ ಕೊಡುವ ಅತಿ ದೊಡ್ಡ ರಾಜಕೀಯ ಹೆಡ್ಡತನ. ನಮ್ಮ ದೇಶದ ಇತಿಹಾಸವನ್ನು ಒಮ್ಮೆ ತೆರೆದು ನೋಡಿದರೆ, ರಕ್ತಸಿಕ್ತ ಪುಟಗಳಲ್ಲಿ ಎದ್ದು ಕಾಣುವುದು ವೀರರ ಪರಾಕ್ರಮದ ಕಥೆಗಳು ಮಾತ್ರವೇ ಅಲ್ಲ.. ಜೊತೆಗೆ– ಅತಿಯಾದ ಧರ್ಮಸಂಕಟ ಮತ್ತು ತಪ್ಪು ಕ್ಷಮಾದಾನಗಳಿಂದಾಗಿ ಬೆನ್ನಿಗೆ ಹಾಕಿಸಿಕೊಂಡ ನಂಬಿಕೆದ್ರೋಹದ ಚೂರಿಗಳ ಕಥೆಗಳೂ ಕೂಡ.

ಭಾರತದ ನಕ್ಷೆಯನ್ನೇ ಬದಲಿಸಿದ, ಕೋಟ್ಯಂತರ ಜನರ ದಾರುಣ ಸಾವಿಗೆ ಕಾರಣವಾದ ಇತಿಹಾಸದ ನೈಜ ಘಟನೆಗಳು ಇಲ್ಲಿವೆ:

## ಮಲ್ಹಾರರಾವ್ ಹೋಳ್ಕರ್ ಮತ್ತು ನಜೀಬ್–ಉದ್–ದೌಲಾ (ಪಾಣಿಪತ್‌ನ ಮಹಾನರಮೇಧ)

ಮರಾಠರ ಇತಿಹಾಸದಲ್ಲಿ 1761ರ ಪಾಣಿಪತ್ ಯುದ್ಧ ಅತ್ಯಂತ ಕಪ್ಪು ಅಧ್ಯಾಯ. ಆದರೆ, ಈ ಯುದ್ಧ ನಡೆಯಲು ಮತ್ತು ಮರಾಠರ ಇಡೀ ಪೀಳಿಗೆಯೇ ಸರ್ವನಾಶವಾಗಲು ಕಾರಣವಾಗಿದ್ದು ಮಲ್ಹಾರರಾವ್ ಹೋಳ್ಕರ್ ನೀಡಿದ ಕ್ಷಮೆ.

ರೋಹಿಲಾ ಸರ್ದಾರ ನಜೀಬ್–ಉದ್–ದೌಲಾ ಮರಾಠರ ವಿರುದ್ಧ ಸತತವಾಗಿ ಸಂಚು ಹೂಡುತ್ತಿದ್ದ. ರಘುನಾಥರಾವ್ (ರಾಘೋಬಾ) ನಜೀಬನನ್ನು ಬಂಧಿಸಿ, ಆತನ ತಲೆಯನ್ನು ಕತ್ತರಿಸಿ ಮರಾಠ ಸಾಮ್ರಾಜ್ಯವನ್ನು ಸುರಕ್ಷಿತಗೊಳಿಸಲು ನಿರ್ಧರಿಸಿದ್ದ. ಆದರೆ ಮರಾಠ ಹಿರಿಯ ಸೇನಾಪತಿ ಮಲ್ಹಾರರಾವ್ ಹೋಳ್ಕರ್, ನಜೀಬನನ್ನು ತನ್ನ "ಧರ್ಮಪುತ್ರ" (ಸಾಕುಮಗ) ಎಂದು ಭಾವಿಸಿ, ರಘುನಾಥರಾವ್ ಬಳಿ ವಿನಂತಿಸಿಕೊಂಡು ಆತನಿಗೆ ಕ್ಷಮಾದಾನ ಕೊಡಿಸಿ ಜೀವ ಉಳಿಸಿದ.

ಬೆನ್ನಿಗೆ ಬಿದ್ದ ಚೂರಿ: ಕ್ಷಮೆ ಪಡೆದು ಬದುಕಿದ ನಜೀಬ್, ನೇರವಾಗಿ ಅಫ್ಘಾನಿಸ್ತಾನಕ್ಕೆ ಹೋಗಿ ಅಹ್ಮದ್ ಶಾ ಅಬ್ದಾಲಿಯನ್ನು ಭಾರತದ ಮೇಲೆ ಆಕ್ರಮಣ ಮಾಡಲು ಆಹ್ವಾನಿಸಿದ! 1761ರ ಮೂರನೇ ಪಾಣಿಪತ್ ಯುದ್ಧದಲ್ಲಿ ನಜೀಬ್, ಅಬ್ದಾಲಿಯ ಜೊತೆಗೂಡಿ ಮರಾಠರ ವಿರುದ್ಧ ಹೋರಾಡಿದ. ಒಂದೇ ದಿನದಲ್ಲಿ 20,000ಕ್ಕೂ ಹೆಚ್ಚು ಮರಾಠ ವೀರರು ಮಾರಣಹೋಮಕ್ಕೊಳಗಾದರು. ಮಹಾರಾಷ್ಟ್ರದ ಪ್ರತಿಯೊಂದು ಮನೆಯಿಂದಲೂ ಒಬ್ಬ ಯುವಕ ಹೆಣವಾದ. ಹೋಳ್ಕರ್ ನೀಡಿದ 'ಒಂದು ಕ್ಷಮೆ', ಮರಾಠ ಸಾಮ್ರಾಜ್ಯದ ಬೆನ್ನೆಲುಬನ್ನೇ ಮುರಿಯಿತು!

## ಪೃಥ್ವಿರಾಜ್ ಚೌಹಾಣ್: ಒಂದು ಕ್ಷಮೆ, ಸಾವಿರ ವರ್ಷದ ದಾಸ್ಯ!

**ಕ್ರಿ.ಶ. 1191. ತರೈನ್‌ನ ರಣಭೂಮಿ.**

ಯುದ್ಧದ ದೂಳು ಅಡಗುತ್ತಿದ್ದಂತೆ, ಅಫ್ಘಾನಿಸ್ತಾನದಿಂದ ಬಂದಿದ್ದ ರಕ್ತಪಿಪಾಸು ಆಕ್ರಮಣಕಾರ ಮೊಹಮ್ಮದ್ ಘೋರಿ ಗಾಯಗೊಂಡು, ಶಸ್ತ್ರಗಳನ್ನು ಕಳೆದುಕೊಂಡು, ಸಾವು–ಬದುಕಿನ ನಡುವೆ ಹೋರಾಡುತ್ತಿದ್ದ. ಆತನ ಕತ್ತಿನ ಮೇಲೆಯೇ ಪೃಥ್ವಿರಾಜ್ ಚೌಹಾಣನ ಕತ್ತಿ ಇತ್ತು. ಘೋರಿಯ ಕಣ್ಣುಗಳಲ್ಲಿ ಸಾವಿನ ಭಯವಿತ್ತು. ಆತ ಜೀವಭಿಕ್ಷೆಗಾಗಿ ಬೇಡಿದ.

ಆ ಕ್ಷಣದಲ್ಲಿ, ಚೌಹಾಣನ ಮನಸ್ಸಿನಲ್ಲಿ ರಾಜಪುತರ 'ಕ್ಷತ್ರಿಯ ಧರ್ಮ' ಜಾಗೃತವಾಯಿತು. "ಶರಣಾದವನನ್ನು, ಶಸ್ತ್ರವಿಲ್ಲದವನನ್ನು ಕೊಲ್ಲುವುದು ಧರ್ಮವಲ್ಲ"ಎಂದು ನಂಬಿದ ಚೌಹಾಣ, ಆ ನರರಾಕ್ಷಸನನ್ನು ಕ್ಷಮಿಸಿ, ಗೌರವದಿಂದ ಆತನ ದೇಶಕ್ಕೆ ವಾಪಸ್ ಕಳುಹಿಸಿದರು! ಆದರೆ, ಘೋರಿಗೆ ಧರ್ಮವೂ ಗೊತ್ತಿರಲಿಲ್ಲ, ಕ್ಷಮೆಯ ಬೆಲೆಯೂ ಗೊತ್ತಿರಲಿಲ್ಲ!



ತನ್ನ ದೇಶಕ್ಕೆ ಮರಳಿದ ಘೋರಿ, ತನಗೆ ಸಿಕ್ಕ ಕ್ಷಮೆಯನ್ನು ಕೃತಜ್ಞತೆಯಿಂದ ನೋಡಲಿಲ್ಲ; ಬದಲಿಗೆ ಅದನ್ನು ತನಗಾದ ಅವಮಾನ ಎಂದು ಭಾವಿಸಿದ. ಸಿಂಹಾಸನದ ಮೇಲಿದ್ದ ಕಿರೀಟವನ್ನು ಬಕ್ಕತಲೆಯ ಮೇಲೆ ಇಡದೆ, ಮಲಗಲು ಮಂಚವನ್ನು ಬಳಸದೆ, ಒಂದು ವರ್ಷಗಳ ಕಾಲ ಹಗಲು–ರಾತ್ರಿ ಚೌಹಾಣರ ರಕ್ತಕ್ಕಾಗಿ ಕಾದ.

<u>**1192ನೇ ಇಸವಿ:**</u> ಎರಡನೇ ತರೈನ್ ಯುದ್ಧದಲ್ಲಿ ಘೋರಿ ರಾಜಪುತರ ಯಾವ ಧರ್ಮನಿಯಮವನ್ನೂ ಪಾಲಿಸಲಿಲ್ಲ. ಸೂರ್ಯೋದಯಕ್ಕೂ ಮುನ್ನ, ರಾಜಪುತ ಸೈನಿಕರು ಪ್ರಾತಃಕಾಲದ ಪೂಜೆಯಲ್ಲಿದ್ದಾಗ ಹಿಂದೆಂದೂ ಕಾಣದ ದ್ರೋಹದಿಂದ ದಾಳಿ ಮಾಡಿದ.

ಯುದ್ಧದಲ್ಲಿ ಚೌಹಾಣರು ಬಂದಿಯಾದರು, ಘೋರಿ ತನಗೆ ಕ್ಷಮೆ ನೀಡಿದ ದೊರೆಯ ಕಣ್ಣುಗಳಿಗೆ ಕಾದ ಕಬ್ಬಿಣದ ಸಲಾಕೆಗಳನ್ನು ಚುಚ್ಚಿ ಶಾಶ್ವತವಾಗಿ ಕುರುಡಾಗಿಸಿದ!, ಪೃಥ್ವೀರಾಜ ಚೌಹಾಣನ ಆ ಒಂದು ಕ್ಷಮೆ–ದೆಹಲಿಯ ಸಿಂಹಾಸನದ ಮೇಲೆ ಸುಲ್ತಾನರ, ಮೊಘಲರ ಆಳ್ವಿಕೆಗೆ ದಾರಿಯಾಯಿತು. ಸೋಮನಾಥದಂತಹ ಸಾವಿರಾರು ದೇವಾಲಯಗಳು ಧ್ವಂಸಗೊಂಡವು, ಲಕ್ಷಾಂತರ ಹೆಣ್ಣುಮಕ್ಕಳು ಗುಲಾಮರಾಗಿ ಮಾರಲ್ಪಟ್ಟರು.

ಶತ್ರುವಿಗೆ ನೀಡಿದ ಕ್ಷಮೆ, ನಿಮ್ಮ ಸ್ವಂತ ನಾಡಿನ ಭವಿಷ್ಯಕ್ಕೆ ಬರೆದ ಮರಣಶಾಸನವಾಗುತ್ತದೆ ಎಂಬುದಕ್ಕೆ ಪೃಥ್ವಿರಾಜ್ ಚೌಹಾಣರ ಇತಿಹಾಸವೇ ಜೀವಂತ ಸಾಕ್ಷಿ.

## ಸಿರಾಜ್-ಉದ್-ದೌಲ ಮತ್ತು ಮೀರ್ ಜಾಫರ್ (200 ವರ್ಷಗಳ ಬ್ರಿಟಿಷ್ ದಾಸ್ಯ)

1757ರ ಪ್ಲಾಸಿ ಯುದ್ಧದಲ್ಲಿ ಭಾರತ ಬ್ರಿಟಿಷರ ವಶವಾಗಲು ಕಾರಣ–ಬಂಗಾಳದ ನವಾಬ ಸಿರಾಜ್–ಉದ್–ದೌಲ ತನ್ನ ಸೇನಾಪತಿ ಮೀರ್ ಜಾಫರನನ್ನು ಪದೇ ಪದೇ ಕ್ಷಮಿಸಿದ್ದು!

ಮೀರ್ ಜಾಫರ್ ಬ್ರಿಟಿಷರ ಜೊತೆ ಸೇರಿ ತನ್ನ ವಿರುದ್ಧ ಸಂಚು ಮಾಡುತ್ತಿದ್ದಾನೆ ಎಂಬುದು ನವಾಬ ಸಿರಾಜ್–ಉದ್–ದೌಲನಿಗೆ ಮೊದಲೇ ತಿಳಿದಿತ್ತು. ಆತನನ್ನು ತಕ್ಷಣವೇ ಗಲ್ಲಿಗೇರಿಸುವ ಅಧಿಕಾರ ನವಾಬನಿಗಿತ್ತು.

ಆದರೆ, ಸಿರಾಜ್–ಉದ್–ದೌಲ ಭಾವನಾತ್ಮಕವಾಗಿ ಯೋಚಿಸಿ, ಮೀರ್ ಜಾಫರನನ್ನು ಕರೆಸಿ, "ಪವಿತ್ರ ಕುರಾನ್ ಮೇಲೆ ಕೈಯಿಟ್ಟು ಪ್ರಮಾಣ ಮಾಡು, ನನಗೆ ದ್ರೋಹ ಮಾಡುವುದಿಲ್ಲ" ಎಂದು ಹೇಳಿ ಆತನನ್ನು ಕ್ಷಮಿಸಿ, ಸೇನಾಪತಿ ಹುದ್ದೆಯಲ್ಲೇ ಮುಂದುವರಿಸಿದ.

ಪರಿಣಾಮ ಏನಾಯಿತು? ಪ್ಲಾಸಿ ಕಣದಲ್ಲಿ ಯುದ್ಧ ಶುರುವಾದಾಗ, ಮೀರ್ ಜಾಫರ್ ತನ್ನ ಇಡೀ ಸೈನ್ಯವನ್ನು ಮೌನವಾಗಿ ನಿಲ್ಲಿಸಿ ಬ್ರಿಟಿಷರಿಗೆ ಗೆಲುವು ತಂದಿತ್ತ! ಸಿರಾಜ್–ಉದ್–ದೌಲನ ಕೊಲೆಯಾಯಿತು. ಆ ಕ್ಷಮೆಯ ಬೆಲೆಯನ್ನು ಭಾರತ 200 ವರ್ಷಗಳ ಕಾಲ ಬ್ರಿಟಿಷರ ಗುಲಾಮಗಿರಿಯ ಮೂಲಕ ತೆರಬೇಕಾಯಿತು.

## ವಿಜಯನಗರದ ಅಳಿಯ ರಾಮರಾಯ ಮತ್ತು ಗಿಲಾನಿ ಸಹೋದರರು (ತಾಳಿಕೋಟೆ ಕದನ – 1565)

ದಕ್ಷಿಣ ಭಾರತದ ಹೆಮ್ಮೆಯ, ಚಿನ್ನ–ರತ್ನಗಳನ್ನು ಬೀದಿಯಲ್ಲಿ ಮಾರುತ್ತಿದ್ದ ವೈಭವೋಪೇತ 'ವಿಜಯನಗರ ಸಾಮ್ರಾಜ್ಯ' ಒಂದೇ ದಿನದಲ್ಲಿ ಧ್ವಂಸವಾಗಿದ್ದಕ್ಕೂ ಈ 'ಅತಿಯಾದ ನಂಬಿಕೆ ಮತ್ತು ಕ್ಷಮೆಯೇ' ಕಾರಣ!

ವಿಜಯನಗರದ ದೊರೆ ಅಳಿಯ ರಾಮರಾಯ, ಸುಲ್ತಾನರ ಆಸ್ಥಾನದಿಂದ ಓಡಿ ಬಂದಿದ್ದ ಹಸನ್ ಗಿಲಾನಿ ಮತ್ತು ಹುಸೇನ್ ಗಿಲಾನಿ ಎಂಬ ಇಬ್ಬರು ಸೇನಾಪತಿಗಳಿಗೆ ತನ್ನ ಆಶ್ರಯ ನೀಡಿದ್ದ. ಅವರನ್ನು ನಂಬಿ, ತನ್ನ ಸೈನ್ಯದ ಪ್ರಮುಖ ಫಿರಂಗಿ ಪಡೆ ಹಾಗೂ ಸಾವಿರಾರು ಮುಸ್ಲಿಂ ಸೈನಿಕರ ನಾಯಕತ್ವವನ್ನು ಅವರ ಕೈಗೆ ಕೊಟ್ಟಿದ್ದ. 1565ರ ತಾಳಿಕೋಟೆ (ರಕ್ಕಸ ತಂಗಡಿ) ಯುದ್ಧದಲ್ಲಿ ದಖನ್ ಸುಲ್ತಾನರ ವಿರುದ್ಧ ವಿಜಯನಗರ ಗೆಲ್ಲುವ ಹಂತದಲ್ಲಿದ್ದಾಗ, ಈ ಗಿಲಾನಿ ಸಹೋದರರು ರಾಮರಾಯನ ಬೆನ್ನಿಗೆ ಚೂರಿ ಇರಿದರು. ತಮ್ಮ ಫಿರಂಗಿಗಳನ್ನು ವಿಜಯನಗರದ ಸ್ವಂತ ಸೈನಿಕರತ್ತ ತಿರುಗಿಸಿ ದಾಳಿ ಮಾಡಿದರು.

ಪರಿಣಾಮ: ರಾಮರಾಯನ ಶಿರಚ್ಛೇದನವಾಯಿತು. ಮುಂದಿನ ಕೆಲವೇ ದಿನಗಳಲ್ಲಿ ವಿಶ್ವದ ಅತ್ಯಂತ ಶ್ರೀಮಂತ ನಗರವಾಗಿದ್ದ ಹಂಪಿ, ಆಕ್ರಮಣಕಾರರಿಂದ ಸುಟ್ಟು ಬೂದಿಯಾಗಿ ಹಾಳು ಹಂಪೆಯಾಗಿ ದ್ರೋಹಕ್ಕೆ ರೂಪಕದಂತೆ ಇಂದಿಗೂ ನಿಂತಿದೆ.

ಇತಿಹಾಸ ನಮಗೆ ಪದೇ ಪದೇ ಸಾರಿ ಹೇಳುವ ಒಂದು ಕಟು ಸತ್ಯವಿದೆ:

ಹಾವಿಗೆ ಹಾಲೆರೆದು ಸಾಕಿದರೆ ಅದು ವಿಷವನ್ನಷ್ಟೇ ಕೊಡಬಲ್ಲದು, ಪ್ರೀತಿಯನ್ನಲ್ಲ.

ವ್ಯಕ್ತಿಗತ ಬದುಕಿನಲ್ಲಿ ಕ್ಷಮೆ ಉದಾತ್ತ ಗುಣವಾಗಿರಬಹುದು. ಆದರೆ, ದೇಶ, ಧರ್ಮ, ಅಧಿಕಾರ ಮತ್ತು ರಾಷ್ಟ್ರೀಯ ಭದ್ರತೆಯ ವಿಷಯಕ್ಕೆ ಬಂದಾಗ ಸುಳ್ಳರಿಗೆ ಮತ್ತು ಶತ್ರುವಿಗೆ ನೀಡುವ ಕ್ಷಮೆ, ತನ್ನ ಸ್ವಂತ ಜನರಿಗೆ ಮಾಡುವ ಅತಿ ದೊಡ್ಡ ದ್ರೋಹ!

<u>**ಶ್ರೀನಿಧಿ ಡಿ.ಎಸ್**</u>

# ಗೇಮಿಂಗ್ ಚಟ, ಸಾಲದ ಹೊರೆ: ಮಹಿಳೆ ಆತ್ಮಹತ್ಯೆ

<u>**● ವಿಕ್ರಮ ವಾಹಿನಿ । ಬೆಂಗಳೂರು**</u>

ಆನ್‌ಲೈನ್ ಗೇಮಿಂಗ್ ಚಟಕ್ಕೆ ಬಿದ್ದು ಲಕ್ಷಾಂತರ ರೂಪಾಯಿ ಕಳೆದುಕೊಂಡು ಸಾಲದ ಸುಳಿಗೆ ಸಿಲುಕಿದ್ದ 28 ವರ್ಷದ ಮಹಿಳೆಯೊಬ್ಬರು ಆತ್ಮಹತ್ಯೆಗೆ ಶರಣಾಗಿರುವ ಘಟನೆ ನೆಲಮಂಗಲ ತಾಲೂಕಿನ ಬೊಮ್ಮನಹಳ್ಳಿಯಲ್ಲಿ ನಡೆದಿದೆ.

ಮೃತರನ್ನು ರಂಜಿತಾ ಎಂದು ಗುರುತಿಸಲಾಗಿದೆ. ನೆಲಮಂಗಲದ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಅವರು, ಪತಿ ಅರುಣ್ ಹಾಗೂ ಏಳು ವರ್ಷದ ಮಗನೊಂದಿಗೆ ಕಳೆದ ಐದು ವರ್ಷಗಳಿಂದ ನೆಲಮಂಗಲದಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ಮೂಲತಃ ಗುಲ್ಬರ್ಗಾ ಜಿಲ್ಲೆಯವರಾಗಿದ್ದ ದಂಪತಿ ಸುಮಾರು 10 ವರ್ಷಗಳ ಹಿಂದೆ ವಿವಾಹವಾಗಿದ್ದರು.

ಸುಮಾರು ಒಂದು ವರ್ಷದ ಹಿಂದೆ ರಂಜಿತಾ ಆನ್‌ಲೈನ್ ಗೇಮಿಂಗ್ ಚಟಕ್ಕೆ ಒಳಗಾಗಿದ್ದರು ಎನ್ನಲಾಗಿದೆ. ಗೇಮಿಂಗ್‌ನಲ್ಲಿ ಲಕ್ಷಾಂತರ ರೂಪಾಯಿ ಕಳೆದುಕೊಂಡು ಸಾಲ ಮಾಡಿಕೊಂಡಿದ್ದರು. ಈ ಹಿಂದೆ ಅವರು ಮಾಡಿದ್ದ ಸುಮಾರು 15 ಲಕ್ಷ ಸಾಲವನ್ನು ತಾಯಿ ಹಾಗೂ ಪತಿ ಸೇರಿ ತೀರಿಸಿದ್ದರು. ಆದರೂ ಗೇಮಿಂಗ್ ಚಟ ಮುಂದುವರಿಸಿದ್ದ ರಂಜಿತಾ ಮತ್ತೆ ಸಾಲ ಮಾಡಿಕೊಂಡಿದ್ದರು ಎಂದು ತಿಳಿದುಬಂದಿದೆ.

ಎರಡು ದಿನಗಳ ಹಿಂದೆ ಅರುಣ್ ಅವರು ಕೆಲಸದ ನಿಮಿತ್ತ ಗುಲ್ಬರ್ಗಾಕ್ಕೆ ತೆರಳಿದ್ದರು. ಮನೆಯಲ್ಲಿ ಏಳು ವರ್ಷದ ಮಗನೊಂದಿಗೆ ಇದ್ದ ರಂಜಿತಾ, ರಾತ್ರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಘಟನೆ ಬೆಳಕಿಗೆ ಬಂದ ಬಳಿಕ ನೆಲಮಂಗಲ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು.

ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಆನ್‌ಲೈನ್ ಗೇಮಿಂಗ್ ಹಾಗೂ ಸಾಲದ ಒತ್ತಡವೇ ಆತ್ಮಹತ್ಯೆಗೆ ಕಾರಣವೇ ಎಂಬುದೂ ಸೇರಿದಂತೆ ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ. ಘಟನೆಯಿಂದ ಕುಟುಂಬಸ್ಥರು ಹಾಗೂ ಸ್ಥಳೀಯರಲ್ಲಿ ಆಘಾತ ಉಂಟಾಗಿದೆ.

ಆನ್‌ಲೈನ್ ಗೇಮಿಂಗ್ ವ್ಯಸನದಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದ ರಂಜಿತಾ, ಈ ಹಿಂದೆ ಮಾಡಿಕೊಂಡಿದ್ದ ಸಾಲ ತೀರಿದ ಬಳಿಕವೂ ಮತ್ತೆ ಸಾಲ ಮಾಡಿಕೊಂಡಿದ್ದರು ಎನ್ನಲಾಗಿದೆ.

# ಇಂದಿನಿಂದ ಅಧಿವೇಶನ: ವಾಗ್ವಾದಕ್ಕೆ ಅಖಾಡ ಸಿದ್ಧ

1ನೇ ಪುಟದಿಂದ

ಇದರ ಜತೆಗೆ ಪೊಲೀಸ್ ನೇಮಕಾತಿ ಪರೀಕ್ಷೆ ಹಾಗೂ ವಿವಿಧ ಸರ್ಕಾರಿ ಹುದ್ದೆಗಳ ಭರ್ತಿಗೆ ಸಂಬಂಧಿಸಿದ ಗೊಂದಲಗಳನ್ನೂ ಪ್ರಸ್ತಾಪಿಸುವ ಸಾಧ್ಯತೆಯಿದೆ. ನಿರುದ್ಯೋಗಿ ಯುವಕರಿಗೆ ಉದ್ಯೋಗ ಕಲ್ಪಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂಬ ಆರೋಪವನ್ನು ಮುಂದಿಟ್ಟುಕೊಂಡು ವಿಪಕ್ಷಗಳು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಬಹುದು.

<u>**ಕಾವೇರಿ ನೀರು ಪ್ರಮುಖ ಅಸ್ತ್ರ**</u>

ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಸೂಚನೆ ಅಧಿವೇಶನದಲ್ಲಿ ಪ್ರಮುಖ ಚರ್ಚೆಯ ವಿಷಯವಾಗುವ ಸಾಧ್ಯತೆಯಿದೆ. ರಾಜ್ಯದ ಜಲಾಶಯಗಳ ನೀರಿನ ಮಟ್ಟ, ಒಳಹರಿವು, ಕುಡಿಯುವ ನೀರಿನ ಅಗತ್ಯ ಹಾಗೂ ರೈತರ ಹಿತಾಸಕ್ತಿಯನ್ನು ಪರಿಗಣಿಸದೆ ನೀರು ಹರಿಸಲಾಗುತ್ತಿದೆ ಎಂಬ ಆರೋಪವನ್ನು ವಿಪಕ್ಷಗಳು ಮಾಡಬಹುದು.

ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯದ ನಿಲುವೇನು, ರೈತರ ಹಿತ ಕಾಪಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಎಂಬುದನ್ನು ಪ್ರತಿಪಕ್ಷಗಳು ಪ್ರಶ್ನಿಸುವ ಸಾಧ್ಯತೆಯಿದೆ. ನೀರಾವರಿ ಯೋಜನೆಗಳ ಪ್ರಗತಿ ಹಾಗೂ ವಿವಿಧ ಜಿಲ್ಲೆಗಳಲ್ಲಿನ ನೀರಿನ ಸಮಸ್ಯೆಯ ಬಗ್ಗೆಯೂ ಚರ್ಚೆ ನಡೆಯುವ ನಿರೀಕ್ಷೆಯಿದೆ.

<u>**ವಾಲ್ಮೀಕಿ ನಿಗಮ ಪ್ರಕರಣ ಮತ್ತೆ ಪ್ರಸ್ತಾಪ**</u>

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣವೂ ಅಧಿವೇಶನದಲ್ಲಿ ಮತ್ತೆ ಮುನ್ನೆಲೆಗೆ ಬರುವ ಸಾಧ್ಯತೆಯಿದೆ. ಪ್ರಕರಣದಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಅವರ ಹೆಸರು ಪ್ರಸ್ತಾಪವಾಗಿರುವ ಹಿನ್ನೆಲೆಯಲ್ಲಿ, ಸರ್ಕಾರದ ಭ್ರಷ್ಟಾಚಾರ ವಿರೋಧಿ ನಿಲುವಿನ ಕುರಿತು ಬಿಜೆಪಿ ಪ್ರಶ್ನೆಗಳನ್ನು ಎತ್ತಬಹುದು.

ಸಿಬಿಐ ತನಿಖೆ, ಆರೋಪಪಟ್ಟಿ ಹಾಗೂ ಪ್ರಕರಣದ ಮುಂದಿನ ಬೆಳವಣಿಗೆಗಳ ಕುರಿತು ಸರ್ಕಾರದಿಂದ ಸ್ಪಷ್ಟನೆ ಪಡೆಯಲು ಪ್ರತಿಪಕ್ಷಗಳು ಪ್ರಯತ್ನಿಸುವ ಸಾಧ್ಯತೆಯಿದೆ. ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಭ್ರಷ್ಟಾಚಾರ ಹಾಗೂ ಆಡಳಿತಾತ್ಮಕ ಲೋಪಗಳ ಆರೋಪಗಳನ್ನೂ ಇದೇ ಸಂದರ್ಭದಲ್ಲಿ ಪ್ರಸ್ತಾಪಿಸುವ ಸಾಧ್ಯತೆ ಇದೆ.

<u>**ರೈತರ ಸಮಸ್ಯೆಗಳ ಸರಣಿ**</u>

ಗೊಬ್ಬರದ ಲಭ್ಯತೆ, ಬೆಳೆ ನಷ್ಟ, ಬೆಳೆ ಪರಿಹಾರ, ನೀರಾವರಿ ಸೌಲಭ್ಯ, ಕೃಷಿ ಉತ್ಪನ್ನಗಳಿಗೆ ಬೆಲೆ ಹಾಗೂ ವಿವಿಧ ಜಿಲ್ಲೆಗಳಲ್ಲಿನ ರೈತರ ಸಮಸ್ಯೆಗಳು ಅಧಿವೇಶನದಲ್ಲಿ ಚರ್ಚೆಗೆ ಬರುವ ನಿರೀಕ್ಷೆಯಿದೆ. ಮಳೆ, ಜಲಾಶಯಗಳ ನೀರಿನ ಲಭ್ಯತೆ ಮತ್ತು ನೀರಾವರಿ ಯೋಜನೆಗಳ ಅನುಷ್ಠಾನದ ಕುರಿತು ಸರ್ಕಾರದ ಗಮನ ಸೆಳೆಯಲು ಪ್ರತಿಪಕ್ಷಗಳು ಮುಂದಾಗಬಹುದು.

ರೈತರಿಗೆ ಸರ್ಕಾರ ನೀಡಿರುವ ಭರವಸೆಗಳು ಎಷ್ಟರ ಮಟ್ಟಿಗೆ ಈಡೇರಿವೆ ಎಂಬುದನ್ನೂ ಪ್ರಶ್ನಿಸುವ ಸಾಧ್ಯತೆಯಿದೆ. ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ, ಕೃಷಿ ಸಾಲ ಹಾಗೂ ನೀರಾವರಿ ಸೌಲಭ್ಯಗಳ ಕುರಿತು ಸರ್ಕಾರದ ಕ್ರಮಗಳ ಬಗ್ಗೆ ಉತ್ತರ ಕೇಳಬಹುದು.

<u>**ಕಾನೂನು ಸುವ್ಯವಸ್ಥೆಗೂ ಒತ್ತು**</u>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ಆರೋಪವನ್ನು ಮುಂದಿಟ್ಟುಕೊಂಡು ಬಿಜೆಪಿ ಮತ್ತು ಜೆಡಿಎಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುವ ಸಾಧ್ಯತೆಯಿದೆ. ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ, ಅಪರಾಧ ಪ್ರಕರಣಗಳು, ಮಾದಕ ವಸ್ತುಗಳ ನಿಯಂತ್ರಣ, ಸೈಬರ್ ಅಪರಾಧ ಸೇರಿದಂತೆ ಹಲವು ವಿಚಾರಗಳು ಸದನದಲ್ಲಿ ಪ್ರಸ್ತಾಪವಾಗಬಹುದು.

ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳ ಸಂಚಾರ ಸಮಸ್ಯೆ, ರಸ್ತೆ ಗುಂಡಿಗಳು, ಮೂಲಸೌಕರ್ಯ ಕೊರತೆ, ತ್ಯಾಜ್ಯ ನಿರ್ವಹಣೆ ಹಾಗೂ ನಗರಾಭಿವೃದ್ಧಿ ಕಾಮಗಾರಿಗಳ ನಿಧಾನಗತಿಯ ಬಗ್ಗೆಯೂ ಚರ್ಚೆ ನಡೆಯುವ ಸಾಧ್ಯತೆಯಿದೆ.

<u>**ಖಾತೆ ಹಂಚಿಕೆ ಗೊಂದಲವೂ ಚರ್ಚೆಗೆ**</u>

ಇತ್ತೀಚೆಗೆ ನಡೆದ ಸಚಿವ ಸಂಪುಟ ವಿಸ್ತರಣೆಯ ಬಳಿಕ ಖಾತೆ ಹಂಚಿಕೆ ಕುರಿತ ಅಸಮಾಧಾನ ಹಾಗೂ ಗೊಂದಲಗಳು ಪ್ರತಿಪಕ್ಷಗಳಿಗೆ ಮತ್ತೊಂದು ರಾಜಕೀಯ ಅಸ್ತ್ರವಾಗುವ ಸಾಧ್ಯತೆಯಿದೆ. ಕೆಲವು ಸಚಿವರಿಗೆ ನೀಡಿರುವ ಖಾತೆಗಳು, ಪ್ರಮುಖ ಇಲಾಖೆಗಳ ಹಂಚಿಕೆ ಹಾಗೂ ಸರ್ಕಾರದೊಳಗಿನ ಅಸಮಾಧಾನದ ಕುರಿತು ವಿಪಕ್ಷಗಳು ಪ್ರಶ್ನೆಗಳನ್ನು ಎತ್ತಬಹುದು.

ಸಚಿವ ಸಂಪುಟದಲ್ಲಿ ಪ್ರಾದೇಶಿಕ ಹಾಗೂ ಸಾಮಾಜಿಕ ಸಮತೋಲನ ಕಾಪಾಡಲಾಗಿದೆಯೇ ಎಂಬ ಪ್ರಶ್ನೆಯನ್ನೂ ಪ್ರತಿಪಕ್ಷಗಳು ಮುಂದಿಡುವ ಸಾಧ್ಯತೆಯಿದೆ.

<u>**ಸರ್ಕಾರದ ತಿರುಗೇಟು ಏನು?**</u>

ಪ್ರತಿಪಕ್ಷಗಳ ಆರೋಪಗಳಿಗೆ ದಾಖಲೆ ಸಮೇತ ಉತ್ತರ ನೀಡಲು ಸರ್ಕಾರ ಸಿದ್ಧವಾಗಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನ, ವಿವಿಧ ಅಭಿವೃದ್ಧಿ ಕಾಮಗಾರಿಗಳು, ಬೆಂಗಳೂರು ಮೂಲಸೌಕರ್ಯ ಅಭಿವೃದ್ಧಿ, ನೀರಾವರಿ ಯೋಜನೆಗಳು ಹಾಗೂ ಸರ್ಕಾರಿ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮಗಳನ್ನು ಸರ್ಕಾರ ಮುಂದಿಟ್ಟುಕೊಳ್ಳುವ ಸಾಧ್ಯತೆಯಿದೆ.

ಭ್ರಷ್ಟಾಚಾರದ ಆರೋಪಗಳಿಗೆ ಸಂಬಂಧಿಸಿದಂತೆ ಕಾನೂನು ತನ್ನದೇ ಆದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ತನಿಖಾ ಸಂಸ್ಥೆಗಳ ವಿಚಾರದಲ್ಲಿ ಸರ್ಕಾರ ಯಾವುದೇ ಹಸ್ತಕ್ಷೇಪ ಮಾಡಿಲ್ಲ ಎಂಬ ನಿಲುವನ್ನು ಆಡಳಿತ ಪಕ್ಷ ಪುನರುಚ್ಚರಿಸಬಹುದು. ಕಾವೇರಿ ವಿಚಾರದಲ್ಲಿಯೂ ರಾಜ್ಯದ ಹಿತಾಸಕ್ತಿ ಮತ್ತು ರೈತರ ಹಿತ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸುವ ಸಾಧ್ಯತೆಯಿದೆ.

<u>**ಗ್ಯಾರಂಟಿ ಯೋಜನೆಗಳೇ ಸರ್ಕಾರದ ಕವಚ**</u>

ಪ್ರತಿಪಕ್ಷಗಳ ಆರೋಪಗಳಿಗೆ ಪ್ರತಿಯಾಗಿ ಕಾಂಗ್ರೆಸ್ ಸರ್ಕಾರ ತನ್ನ ಗ್ಯಾರಂಟಿ ಯೋಜನೆಗಳನ್ನು ಪ್ರಮುಖ ಸಾಧನೆಯಾಗಿ ಮುಂದಿಡುವ ಸಾಧ್ಯತೆಯಿದೆ. ಮಹಿಳೆಯರು, ಬಡವರು, ರೈತರು ಹಾಗೂ ಮಧ್ಯಮ ವರ್ಗದವರಿಗೆ ಸರ್ಕಾರದ ಯೋಜನೆಗಳಿಂದ ಆಗಿರುವ ಪ್ರಯೋಜನಗಳನ್ನು ವಿವರಿಸುವ ಮೂಲಕ ವಿಪಕ್ಷಗಳ ಟೀಕೆಗೆ ತಿರುಗೇಟು ನೀಡಲು ಆಡಳಿತ ಪಕ್ಷ ಸಿದ್ಧವಾಗಿದೆ.

ಅಭಿವೃದ್ಧಿ ಕಾಮಗಾರಿಗಳಿಗೆ ನೀಡಿರುವ ಅನುದಾನ, ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿ, ಸರ್ಕಾರಿ ನೇಮಕಾತಿ ಪ್ರಕ್ರಿಯೆ ಹಾಗೂ ಜನಪರ ಕಾರ್ಯಕ್ರಮಗಳ ಮೂಲಕ ಸರ್ಕಾರ ತನ್ನ ಆಡಳಿತದ ಸಾಧನೆಗಳನ್ನು ಸದನದ ಮುಂದಿಡುವ ನಿರೀಕ್ಷೆಯಿದೆ.

ಒಟ್ಟಿನಲ್ಲಿ, ಆಗಸ್ಟ್ 13ರಿಂದ ಆರಂಭವಾಗಲಿರುವ ಅಧಿವೇಶನ ಕಾವೇರಿ ನೀರು, ರೈತರ ಸಮಸ್ಯೆ, ಭ್ರಷ್ಟಾಚಾರ, ನೇಮಕಾತಿ ಅಕ್ರಮ, ಕಾನೂನು ಸುವ್ಯವಸ್ಥೆ ಮತ್ತು ಸಚಿವ ಖಾತೆ ಹಂಚಿಕೆ ಸೇರಿದಂತೆ ಹಲವು ವಿಚಾರಗಳ ಮೇಲೆ ಕಾವೇರಲಿದೆ. ಪ್ರತಿಪಕ್ಷಗಳ ಆರೋಪಗಳಿಗೆ ಸರ್ಕಾರ ಹೇಗೆ ಉತ್ತರಿಸಲಿದೆ ಮತ್ತು ಯಾವ ವಿಚಾರಗಳು ಸದನದಲ್ಲಿ ರಾಜಕೀಯ ಬಿಸಿ ಹೆಚ್ಚಿಸಲಿವೆ ಎಂಬುದು ಕುತೂಹಲ ಮೂಡಿಸಿದೆ.

# ವರ್ಮಾ ವಿರುದ್ಧದ 3 ಆರೋಪಗಳು ಸಾಬೀತು

1ನೇ ಪುಟದಿಂದ

ತಮ್ಮ ನಿಯಂತ್ರಣದಲ್ಲಿದ್ದ ಆವರಣದಲ್ಲಿ ನಗದು ಪತ್ತೆಯಾದರೂ, ಅದಕ್ಕೂ ತಮಗೂ ಸಂಬಂಧವಿಲ್ಲ ಎಂಬ ವಾದವನ್ನು ಸಮಿತಿ ಒಪ್ಪಿಲ್ಲ.

ಎರಡನೇ ಆರೋಪವಾಗಿ, ಬೆಂಕಿ ಅವಘಡದ ಬಳಿಕ ಸ್ಥಳ ಹಾಗೂ ಪ್ರಮುಖ ಸಾಕ್ಷ್ಯಗಳನ್ನು ಸೂಕ್ತವಾಗಿ ಸಂರಕ್ಷಿಸುವಲ್ಲಿ ವಿಫಲರಾಗಿರುವುದನ್ನು ಸಮಿತಿ ಉಲ್ಲೇಖಿಸಿದೆ. ಮೂರನೇ ಆರೋಪವಾಗಿ, ಘಟನೆಗೆ ಸಂಬಂಧಿಸಿದಂತೆ ವರ್ಮಾ ನೀಡಿದ ವಿವರಣೆಗಳು ಅಪೂರ್ಣವಾಗಿದ್ದು, ಕಾಲಕಾಲಕ್ಕೆ ಬದಲಾಗಿದ್ದವು ಎಂದು ಹೇಳಿದೆ.

ನ್ಯಾಯಮೂರ್ತಿ ವರ್ಮಾ ಅವರು ತಮ್ಮ ಗೈರುಹಾಜರಿಯಲ್ಲಿ ಬೇರೆಯವರು ಹಣ ತಂದಿಟ್ಟಿರಬಹುದು ಎಂಬ ವಾದಕ್ಕೆ ಸಮರ್ಪಕ ಸಾಕ್ಷ್ಯ ಒದಗಿಸಿಲ್ಲ ಎಂದು ಸಮಿತಿ ಅಭಿಪ್ರಾಯಪಟ್ಟಿದೆ. ಇದೇ ವೇಳೆ, ಘಟನಾ ಸ್ಥಳದಲ್ಲಿ ಪತ್ತೆಯಾದ ನಗದನ್ನು ತಕ್ಷಣ ವಶಪಡಿಸಿಕೊಂಡು ಸಾಕ್ಷ್ಯ ಸಂರಕ್ಷಿಸುವಲ್ಲಿ ಪೊಲೀಸ್ ಹಾಗೂ ಅಗ್ನಿಶಾಮಕ ಸಿಬ್ಬಂದಿಯ ಕರ್ತವ್ಯಲೋಪವನ್ನೂ ಸಮಿತಿ ಪ್ರಶ್ನಿಸಿದೆ.

ಈ ವರದಿ ಇದೀಗ ಸಂಸತ್ತಿನ ಮುಂದಿನ ಪ್ರಕ್ರಿಯೆಗೆ ಆಧಾರವಾಗಲಿದ್ದು, ವರ್ಮಾ ವಿರುದ್ಧದ ಕ್ರಮದ ಕುರಿತು ಮುಂದಿನ ಹಂತದಲ್ಲಿ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ.

# ಏನಿರುತ್ತೆ, ಏನಿರಲ್ಲ?

1ನೇ ಪುಟದಿಂದ

ಮಂಡ್ಯದಲ್ಲಿ ಮಾತನಾಡಿದ ಅವರು, ಆರಂಭದಲ್ಲಿ ಬಂದ್‌ಗೆ ಬೆಂಬಲ ನೀಡುವುದಾಗಿ ಹೇಳಿ ಇದೀಗ ಹಿಂದೆ ಸರಿದಿರುವ ಸಂಘಟನೆಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕಾವೇರಿ ನೀರಿನ ವಿಚಾರದಲ್ಲಿ ರಾಜ್ಯದ ಹಿತ ಕಾಪಾಡಬೇಕು ಎಂಬುದು ಬಂದ್‌ನ ಉದ್ದೇಶವಾಗಿದ್ದು, ಎಲ್ಲರೂ ಬಂದ್‌ಗೆ ಬೆಂಬಲ ನೀಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಒಟ್ಟಿನಲ್ಲಿ, ಪ್ರಮುಖ ಸಂಘಟನೆಗಳ ಬೆಂಬಲದ ಕೊರತೆಯಿಂದಾಗಿ ಆ.13ರ ಕರ್ನಾಟಕ ಬಂದ್ ರಾಜ್ಯವ್ಯಾಪಿ ಪರಿಣಾಮ ಬೀರುವ ಸಾಧ್ಯತೆ ಕಡಿಮೆ ಎನ್ನಲಾಗುತ್ತಿದ್ದು, ಬಹುತೇಕ ಕಡೆ ಜನಜೀವನ ಹಾಗೂ ಅಗತ್ಯ ಸೇವೆಗಳು ಯಥಾಸ್ಥಿತಿಯಲ್ಲಿ ಮುಂದುವರಿಯುವ ನಿರೀಕ್ಷೆಯಿದೆ.

ಬಂದ್ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ಸಾಧ್ಯತೆಯಿದೆ. ಸಾರ್ವಜನಿಕರಿಗೆ ತೊಂದರೆಯಾಗದಂತೆ ಅಗತ್ಯ ಭದ್ರತಾ ವ್ಯವಸ್ಥೆ ಕಲ್ಪಿಸಲು ಜಿಲ್ಲಾಡಳಿತಗಳು ಸಿದ್ಧತೆ ನಡೆಸಿವೆ.

ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯದ ರೈತರ ಹಿತ ಕಾಪಾಡಬೇಕು ಎಂದು ವಿವಿಧ ರೈತ ಸಂಘಟನೆಗಳು ಒತ್ತಾಯಿಸಿವೆ. ಜಲಾಶಯಗಳ ನೀರಿನ ಮಟ್ಟ, ಒಳಹರಿವು ಹಾಗೂ ರಾಜ್ಯದ ಕುಡಿಯುವ ನೀರಿನ ಅಗತ್ಯವನ್ನು ಪರಿಗಣಿಸಿ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಬಂದ್‌ಗೆ ಸಂಪೂರ್ಣ ಬೆಂಬಲ ಇಲ್ಲದಿರುವುದರಿಂದ ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳಲ್ಲಿ ಸಂಚಾರ ಹಾಗೂ ವಾಣಿಜ್ಯ ಚಟುವಟಿಕೆಗಳು ಬಹುತೇಕ ಸಹಜವಾಗಿರುವ ನಿರೀಕ್ಷೆಯಿದೆ. ಆದಾಗ್ಯೂ, ಬೆಂಬಲಿತ ಸಂಘಟನೆಗಳು ಪ್ರತಿಭಟನೆ, ಮೆರವಣಿಗೆ ನಡೆಸುವ ಸಾಧ್ಯತೆಯಿರುವುದರಿಂದ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

# ಹೆಬ್ಬಾಳ ಟನಲ್ ಕುರಿತು ಡಿಕೆಶಿಗೆ ತೇಜಸ್ವಿ ಪತ್ರ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿರುವ ಹೆಬ್ಬಾಳ ಶಾರ್ಟ್ ಟನಲ್ ಯೋಜನೆ ಕುರಿತು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಆಕ್ಷೇಪ ವ್ಯಕ್ತಪಡಿಸಿದ್ದು, ವೈಜ್ಞಾನಿಕ ಹಾಗೂ ತಾಂತ್ರಿಕ ಮೌಲ್ಯಮಾಪನ ಪೂರ್ಣಗೊಳ್ಳುವವರೆಗೆ ಯೋಜನೆಯನ್ನು ಮುಂದುವರಿಸಬಾರದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.

ಸುಮಾರು 1,140 ಕೋಟಿ ಅಂದಾಜು ವೆಚ್ಚದ ಈ ಯೋಜನೆಯು ಹೆಬ್ಬಾಳ ಕೆರೆಯ ಜಮೀನಿನ ಮೂಲಕ ಹಾದುಹೋಗಲಿದ್ದು, ಕಾಮಗಾರಿಗಾಗಿ ಸುಮಾರು 3.45 ಎಕರೆ ಭೂಮಿ ಬಳಸಲಾಗುತ್ತಿದೆ ಎಂದು ತೇಜಸ್ವಿ ಸೂರ್ಯ ಪತ್ರದಲ್ಲಿ ತಿಳಿಸಿದ್ದಾರೆ. ಯೋಜನೆಯು



ಭವಿಷ್ಯದ ಮೆಟ್ರೊ ರೆಡ್ ಲೈನ್ ಹಾಗೂ ಉಪನಗರ ರೈಲು ಯೋಜನೆಗಳೊಂದಿಗೆ ಸಂಘರ್ಷಿಸುವ ಸಾಧ್ಯತೆಯ ಬಗ್ಗೆಯೂ ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಯೋಜನೆ ಕೈಗೆತ್ತಿಕೊಳ್ಳುವ ಮುನ್ನ ಅಗತ್ಯವಿರುವ ಸಮಗ್ರ ಸಂಚಾರ ಅಧ್ಯಯನ ನಡೆಸಲಾಗಿದೆಯೇ ಎಂಬುದರ ಬಗ್ಗೆಯೂ ಸಂಸದರು ಪ್ರಶ್ನೆ ಎತ್ತಿದ್ದಾರೆ. ಬೆಂಗಳೂರು ಮಹಾನಗರ ಭೂ ಸಾರಿಗೆ ಪ್ರಾಧಿಕಾರದ (ಬಿಎಂಎಲ್‌ಟಿಎ) ಅನುಮೋದನೆ ಪಡೆಯದೆ ಯೋಜನೆಯನ್ನು ಮುಂದುವರಿಸಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಯೋಜನೆಯಿಂದ ಭವಿಷ್ಯದ ಸಾರಿಗೆ ವ್ಯವಸ್ಥೆಗೆ ಸಮಸ್ಯೆ ಉಂಟಾಗದಂತೆ ಸಮಗ್ರ ಸಂಚಾರ ಸಿಮ್ಯುಲೇಷನ್ ಅಧ್ಯಯನ ನಡೆಸಬೇಕು. ಭಾರತೀಯ ವಿಜ್ಞಾನ ಸಂಸ್ಥೆಯಿಂದ ಸ್ವತಂತ್ರ ತಾಂತ್ರಿಕ ಮೌಲ್ಯಮಾಪನ ಮಾಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಅಲ್ಲದೆ, ನಗರಾಡಳಿತ ಭೂ ಸಾರಿಗೆ ನಿರ್ದೇಶನಾಲಯ ಹಾಗೂ ಬೆಂಗಳೂರು ಮಹಾನಗರ ಭೂ ಸಾರಿಗೆ ಪ್ರಾಧಿಕಾರದ ಅಭಿಪ್ರಾಯ ಪಡೆದು, ಸಂಬಂಧಿಸಿದ ನಾಗರಿಕ ಸಂಘಟನೆಗಳೊಂದಿಗೆ ಅರ್ಥಪೂರ್ಣ ಸಮಾಲೋಚನೆ ನಡೆಸಿದ ಬಳಿಕವೇ ಮುಂದಿನ ಕಾಮಗಾರಿ ಕೈಗೊಳ್ಳಬೇಕು ಎಂದು ತೇಜಸ್ವಿ ಸೂರ್ಯ ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದ್ದಾರೆ.

ಹೆಬ್ಬಾಳ ಕೆರೆ ಪ್ರದೇಶದ ಪರಿಸರ, ಭವಿಷ್ಯದ ಮೆಟ್ರೊ ಹಾಗೂ ಉಪನಗರ ರೈಲು ಸಂಪರ್ಕ ಸೇರಿದಂತೆ ನಗರದ ಒಟ್ಟಾರೆ ಸಾರಿಗೆ ಯೋಜನೆಯನ್ನು ಪರಿಗಣಿಸಿ ನಿರ್ಧಾರ ಕೈಗೊಳ್ಳಬೇಕು. ಒಂದೇ ಯೋಜನೆಯ ಅನುಷ್ಠಾನದಿಂದ ಮತ್ತೊಂದು ಸಾರಿಗೆ ವ್ಯವಸ್ಥೆಗೆ ಅಡ್ಡಿಯಾಗದಂತೆ ಸಮಗ್ರ ಯೋಜನೆ ರೂಪಿಸುವ ಅಗತ್ಯವಿದೆ ಎಂದು ಅವರು ಪತ್ರದಲ್ಲಿ ಹೇಳಿದ್ದಾರೆ.

## ಬೆಂಗಳೂರು ಜಲಮಂಡಳಿ:ನೇರ ಫೋನ್ ಇನ್ ಕಾರ್ಯಕ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಜಲಮಂಡಳಿಯ ವತಿಯಿಂದ ಜಲಮಂಡಳಿ ಅಧ್ಯಕ್ಷರಾದ ಡಾ.ಮಂಜುಳ ಎನ್ ಭಾ.ಆ.ಸೇ., ರವರ ಅಧ್ಯಕ್ಷತೆಯಲ್ಲಿ ಆಗಸ್ಟ್ 14 ರಂದು ಶುಕ್ರವಾರ ಬೆಳಿಗ್ಗೆ 09:30 ರಿಂದ 10:30 ರವರೆಗೆ ನೇರ ಫೋನ್-ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ.

ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು.

ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; 080-22945119 ಮತ್ತು 080-22229639.

ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ.

ಸಾರ್ವಜನಿಕರು ಈ ನೇರ ಫೋನ್-ಇನ್ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ಪ್ರಕಟಣೆಯಲ್ಲಿ ಕೋರಿದೆ.

## ರಷ್ಯಾ ಪರ ಮಧ್ಯಸ್ಥರಾಗಿ ಮಾಜಿ ಸಿಜೆಐ ಡಿ.ವೈ. ಚಂದ್ರಚೂಡ್ ನೇಮಕ

● ವಿಕ್ರಮ ವಾಹಿನಿ । ನವದೆಹಲಿ

ಉಕ್ರೇನ್‌ನ ಸರ್ಕಾರಿ ಸ್ವಾಮ್ಯದ ಓಸ್ಚಾಡ್‌ಬ್ಯಾಂಕ್‌ಗೆ ಸಂಬಂಧಿಸಿದ ಹೂಡಿಕೆ ಒಪ್ಪಂದದ ವಿವಾದದಲ್ಲಿ ತೀರ್ಪು ನೀಡುವ ಮಧ್ಯಸ್ಥಿಕೆ ನ್ಯಾಯಮಂಡಳಿಗೆ ಭಾರತದ ನಿವೃತ್ತ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಅವರನ್ನು ರಷ್ಯಾ ಸರ್ಕಾರ ತನ್ನ ಪರ ಮಧ್ಯಸ್ಥರಾಗಿ ನೇಮಿಸಿದೆ ಎಂದು ವರದಿಯಾಗಿದೆ.

ಗ್ಲೋಬಲ್ ಆರ್ಬಿಟ್ರೇಷನ್ ರಿವ್ಯೂ ವರದಿಯನ್ನು ಉಲ್ಲೇಖಿಸಿ ಬಾರ್ ಆಂಡ್ ಬೆಂಚ್ ಈ ಕುರಿತು ಮಾಹಿತಿ ನೀಡಿದೆ. ಮೂರು ಸದಸ್ಯರ ನ್ಯಾಯಮಂಡಳಿಗೆ ಕೋಸ್ಟಾರಿಕಾದ ಮಧ್ಯಸ್ಥಗಾರ್ತಿ ಹಾಗೂ ಮಾಜಿ ವಾಣಿಜ್ಯ ಸಚಿವೆ ಡಯಾಲಾ ಜಿಮೆನೆಜ್ ಅಧ್ಯಕ್ಷರಾಗಲಿದ್ದಾರೆ. ರಷ್ಯಾ ಮತ್ತು ಓಸ್ಚಾಡ್‌ಬ್ಯಾಂಕ್ ಪರಸ್ಪರ ಒಪ್ಪಿಗೆಯಿಂದ ಜಿಮೆನೆಜ್ ಅವರನ್ನು ನ್ಯಾಯಮಂಡಳಿಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಂಡಿವೆ.



ಓಸ್ಚಾಡ್‌ಬ್ಯಾಂಕ್ ಪರವಾಗಿ ಗ್ರೀಕ್ ಮಧ್ಯಸ್ಥಗಾರ ಹಾಗೂ ಸಿಂಗಾಪುರದ ರಾಷ್ಟ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಸ್ಟಾವ್ರೋಸ್ ಬ್ರೆಕೌಲಾಕಿಸ್ ಅವರನ್ನು ನೇಮಿಸಲಾಗಿದೆ. ಹೀಗಾಗಿ ಡಿ.ವೈ. ಚಂದ್ರಚೂಡ್, ಡಯಾಲಾ ಜಿಮೆನೆಜ್ ಹಾಗೂ ಸ್ಟಾವ್ರೋಸ್ ಬ್ರೆಕೌಲಾಕಿಸ್ ಅವರನ್ನು ಒಳಗೊಂಡ ಮೂರು ಸದಸ್ಯರ ನ್ಯಾಯಮಂಡಳಿ ಪ್ರಕರಣದ ವಿಚಾರಣೆ ನಡೆಸಲಿದೆ. 1998ರಲ್ಲಿ ಉಕ್ರೇನ್ ಮತ್ತು ರಷ್ಯಾ ನಡುವೆ ಮಾಡಿಕೊಂಡಿದ್ದ ದ್ವಿಪಕ್ಷೀಯ ಹೂಡಿಕೆ ಒಪ್ಪಂದದ ಅಡಿಯಲ್ಲಿ ಈ ಮಧ್ಯಸ್ಥಿಕೆ ಪ್ರಕ್ರಿಯೆ ಆರಂಭವಾಗಿದೆ.

ಡೊನೆಟ್ಸ್ಕ್, ಲುಹಾನ್ಸ್ಕ್, ಖೆರ್ಸನ್ ಹಾಗೂ ಜಪೋರಿಝಿಯಾ ಪ್ರದೇಶಗಳಲ್ಲಿದ್ದ ತನ್ನ ಆಸ್ತಿಗಳು ಮತ್ತು ವಾಣಿಜ್ಯ ಕಾರ್ಯಾಚರಣೆಗಳಿಗೆ ಸಂಬಂಧಿಸಿದಂತೆ ಓಸ್ಚಾಡ್‌ಬ್ಯಾಂಕ್ ರಷ್ಯಾ ವಿರುದ್ಧ ಈ ದಾವೆ ಹೂಡಿದೆ. ರಷ್ಯಾದ ಸೇನಾ ಕಾರ್ಯಾಚರಣೆಯಿಂದಾಗಿ ಈ ಆಸ್ತಿಗಳನ್ನು ಕಳೆದುಕೊಂಡಿರುವುದಾಗಿ ಬ್ಯಾಂಕ್ ಆರೋಪಿಸಿದೆ. ಈ ಹಕ್ಕಿನ ಮೌಲ್ಯ ನೂರಾರು ಮಿಲಿಯನ್ ಡಾಲರ್‌ಗಳಷ್ಟಿದೆ ಎಂದು ವರದಿಯಾಗಿದೆ.

2025ರ ಜುಲೈನಲ್ಲಿ ರಷ್ಯಾಕ್ಕೆ ವಿವಾದಕ್ಕೆ ಸಂಬಂಧಿಸಿದ ನೋಟಿಸ್ ನೀಡಲಾಗಿತ್ತು. ಆದರೆ ರಷ್ಯಾದಿಂದ ಯಾವುದೇ ಪ್ರತಿಕ್ರಿಯೆ ಬಾರದ ಹಿನ್ನೆಲೆಯಲ್ಲಿ ಓಸ್ಚಾಡ್‌ಬ್ಯಾಂಕ್ ಮಧ್ಯಸ್ಥಿಕೆ ಪ್ರಕ್ರಿಯೆಯನ್ನು ಆರಂಭಿಸಿದೆ ಎನ್ನಲಾಗಿದೆ.

## ಬೀದರ್ ರೂ 83 ಲಕ್ಷ ದರೋಡೆ: 19 ತಿಂಗಳ ಬಳಿಕ ಬಂಧನ

● ವಿಕ್ರಮ ವಾಹಿನಿ । ಬೀದರ್

ನಗರದ ಶಿವಾಜಿ ವೃತ್ತದ ಬಳಿ ಹಾಡಹಗಲೇ ಸಿಎಂಎಸ್ ನಗದು ವಾಹನದ ಮೇಲೆ ಗುಂಡಿನ ದಾಳಿ ನಡೆಸಿ ರೂ 83 ಲಕ್ಷ ದೋಚಿದ್ದ ಪ್ರಕರಣವನ್ನು ಪೊಲೀಸರು 19 ತಿಂಗಳ ಬಳಿಕ ಭೇದಿಸಿದ್ದಾರೆ. ಬಿಹಾರದಲ್ಲಿ ಕಾರ್ಯಾಚರಣೆ ನಡೆಸಿದ ವಿಶೇಷ ತಂಡ ಅಲೋಕ್ ಹಾಗೂ ಅಮನ್ ಎಂಬ ಇಬ್ಬರು ಆರೋಪಿಗಳನ್ನು ಬಂಧಿಸಿದೆ.

2025ರ ಜನವರಿ 16ರಂದು ಎಟಿಎಂಗೆ ಹಣ ತುಂಬಿಸಲು ಬಂದಿದ್ದ ಸಿಬ್ಬಂದಿ ಮೇಲೆ ದುಷ್ಕರ್ಮಿಗಳು ಗುಂಡು ಹಾರಿಸಿ ಹಣ ದೋಚಿ ಪರಾರಿಯಾಗಿದ್ದರು. ದಾಳಿಯಲ್ಲಿ ಗಿರಿ ವೆಂಕಟೇಶ್ ಸ್ಥಳದಲ್ಲೇ ಮೃತಪಟ್ಟರೆ, ಶಿವಕುಮಾರ್ ಗಾಯಗೊಂಡಿದ್ದರು.

ಎಸ್‌ಪಿ ಪ್ರದೀಪ್ ಗುಂಟೆ ಮಾರ್ಗದರ್ಶನದಲ್ಲಿ 50 ಸಿಬ್ಬಂದಿಯ ವಿಶೇಷ ತಂಡ ಪ್ರಕರಣದ ತನಿಖೆ ನಡೆಸಿತ್ತು. ದರೋಡೆಗೂ ಎರಡು ದಿನ ಮುನ್ನ ಆರೋಪಿಗಳು ಬೀದರ್‌ನಲ್ಲಿ ಉಳಿದುಕೊಂಡಿದ್ದು, ಕೃತ್ಯ ಹಾಗೂ ಪರಾರಿಯ ಮಾರ್ಗವನ್ನು ಮೊದಲೇ ಯೋಜಿಸಿದ್ದರು ಎನ್ನಲಾಗಿದೆ. ಬಂಧಿತ ಆರೋಪಿಗಳನ್ನು ಬಿಹಾರದಿಂದ ಬೀದರ್‌ಗೆ ಕರೆತರಲಾಗುತ್ತಿದ್ದು, ಪ್ರಕರಣದ ಇತರ ಆರೋಪಿಗಳ ಪತ್ತೆಗಾಗಿ ತನಿಖೆ ಮುಂದುವರಿದಿದೆ.

ಪ್ರಕರಣದ ತನಿಖೆ ವೇಳೆ ಆರೋಪಿಗಳು ಬಿಹಾರದಲ್ಲಿ ಅಡಗಿರುವ ಸುಳಿವು ಪತ್ತೆಹಚ್ಚಿದ ಪೊಲೀಸರು, ಅಲ್ಲಿಗೆ ತೆರಳಿ ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ. ಆರೋಪಿಗಳ ವಿಚಾರಣೆಯಿಂದ ದರೋಡೆ ಪ್ರಕರಣದ ಸಂಪೂರ್ಣ ಜಾಲ ಹಾಗೂ ಇತರ ಆರೋಪಿಗಳ ಪಾತ್ರದ ಬಗ್ಗೆ ಹೆಚ್ಚಿನ ಮಾಹಿತಿ ಲಭ್ಯವಾಗುವ ನಿರೀಕ್ಷೆಯಿದೆ.


## ನಾಗೇಂದ್ರ ರಾಜೀನಾಮೆಗೆ ಬಿಜೆಪಿ ಯುವ ಮೋರ್ಚಾ ಒತ್ತಾಯ

● ವಿಕ್ರಮ ವಾಹಿನಿ । ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಬಹುದೊಡ್ಡ ಹಗರಣದ ಸಂಬಂಧ ನಾಗೇಂದ್ರರ ರಾಜೀನಾಮೆ ಪಡೆಯುವಂತೆ ಬಿಜೆಪಿ ಯುವ ಮೋರ್ಚಾ ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಜಗದೀಶ್ ಆರ್. ಚಂದ್ರ ಅವರು ರಾಜ್ಯ ಸರಕಾರ ಮತ್ತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

ಬಿಜೆಪಿ ಬೆಂಗಳೂರು ಮಹಾನಗರ ಯುವ ಮೋರ್ಚಾ ವತಿಯಿಂದ ಇಂದು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹಗರಣ ಸಂಬಂಧ ಕೇಸ್ ಈಗಲೂ ನಡೆಯುತ್ತಿದೆ. ಹಿಂದೆ ಅವರು ರಾಜೀನಾಮೆ ನೀಡಿದ್ದರು.

ಮತ್ತೊಮ್ಮೆ ಅವರಿಗೆ ಅವಕಾಶ ನೀಡಿದ್ದು ಸರಿಯಲ್ಲ ಎಂದು ತಿಳಿಸಿದರು. ಅವರು ರಾಜೀನಾಮೆ ಕೊಡದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಧೀರಜ್ ಮುನಿರಾಜು ಅವರ ನೇತೃತ್ವದಲ್ಲಿ ಬೃಹತ್ ಹೋರಾಟ ಮಾಡಬೇಕಾಗುತ್ತದೆ ಎಂದು ಹೇಳಿದರು.



ಕಾಂಗ್ರೆಸ್ ಸರಕಾರ ರೈತರು, ವಿದ್ಯಾರ್ಥಿಗಳು, ಮಹಿಳಾ ಪರವಾಗಿ ಇಲ್ಲ ಎಂದು ಅವರು ಆಕ್ಷೇಪಿಸಿದರು. ಕಾಂಗ್ರೆಸ್ ಸರಕಾರವು ರಾಜ್ಯದಲ್ಲಿ ಒಬ್ಬ ಮಹಿಳೆಗೂ ಸಚಿವ ಸ್ಥಾನ ನೀಡಿಲ್ಲ ಎಂದು ಟೀಕಿಸಿದರು. ಇವರಿಗೆ ಮಹಿಳೆಯರ ಮತ ಮಾತ್ರ ಬೇಕೇ? ಇದು ಯಾವ ನ್ಯಾಯ ಎಂದು ಕೇಳಿದರು.

ಧಾರವಾಡದಲ್ಲಿ ವಿದ್ಯಾರ್ಥಿ ಪ್ರತಿಭಟನೆ ನಡೆದರೆ ಯಾರೂ ಅವರ ಬಳಿ ತೆರಳುವುದಿಲ್ಲ; ದೆಹಲಿಗೆ ಮಾತ್ರ ಮುಖ್ಯಮಂತ್ರಿಗಳು ಓಡಿ ಹೋಗುತ್ತಾರೆ. ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು. ಇದು ಹೈಕಮಾಂಡ್ ಹೇಳಿದಂತೆ ಕೇಳುವ ಕಾಂಗ್ರೆಸ್ ಸರಕಾರ ಎಂದು ಟೀಕಿಸಿದರು.

ಸಚಿವರ ಖಾತೆ ಹಂಚಿಕೆ ವಿಳಂಬವನ್ನು ಅವರು ಆಕ್ಷೇಪಿಸಿದರು. ಇದರಿಂದ ಜನತೆಗೆ ತೊಂದರೆ ಆಗುತ್ತಿದೆ. ಅಭಿವೃದ್ಧಿ ನೆಲಕಚ್ಚಿದೆ ಎಂದು ದೂರಿದರು. ಇದು ಅತ್ಯಂತ ದುರ್ಬಲ ಸರಕಾರ ಎಂದು ತಿಳಿಸಿದರು.

ಯುವ ಮೋರ್ಚಾ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಯತಿನ್ ವೆಂಕಟೇಶ್, ಯುವ ಮೋರ್ಚಾ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಶಿರಾಡಿಘಾಟ್‌ನಲ್ಲಿ ವಂದೇ ಭಾರತ್ ಟ್ರಯಲ್ ಸಕ್ಸಸ್

● ವಿಕ್ರಮ ವಾಹಿನಿ । ಹಾಸನ

ಬೆಂಗಳೂರು ಮತ್ತು ಮಂಗಳೂರು ನಡುವೆ ಸಂಪರ್ಕ ಕಲ್ಪಿಸುವ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ಪ್ರಾಯೋಗಿಕ ಸಂಚಾರ ಶಿರಾಡಿಘಾಟ್‌ನ ಕಠಿಣ ಮಾರ್ಗದಲ್ಲಿ ಯಶಸ್ವಿಯಾಗಿ ನಡೆದಿದೆ. ಸಕಲೇಶಪುರ ರೈಲು ನಿಲ್ದಾಣದಿಂದ ದಕ್ಷಿಣ ಕನ್ನಡದ ಕುಕ್ಕೆ ಸುಬ್ರಹ್ಮಣ್ಯವರೆಗೆ ರೈಲು ಸಂಚರಿಸಿದ್ದು, ಘಾಟ್ ಪ್ರದೇಶದಲ್ಲಿ ವಂದೇ ಭಾರತ್ ರೈಲು ಸಂಚಾರ ನಡೆಸಿರುವುದು ಮಹತ್ವದ ಬೆಳವಣಿಗೆಯಾಗಿದೆ.

ಸಕಲೇಶಪುರ ನಿಲ್ದಾಣಕ್ಕೆ ವಂದೇ ಭಾರತ್ ರೈಲು ಆಗಮಿಸಿದ ಸಂದರ್ಭದಲ್ಲಿ ಶಾಸಕ ಸಿಮೆಂಟ್ ಮಂಜು ವಿಶೇಷ ಪೂಜೆ ಸಲ್ಲಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಬಳಿಕ ರೈಲಿನ ಪ್ರಾಯೋಗಿಕ ಸಂಚಾರಕ್ಕೆ ಚಾಲನೆ ನೀಡಲಾಯಿತು.

ಶಿರಾಡಿಘಾಟ್ ಮಾರ್ಗವು ಕಡಿದಾದ ಇಳಿಜಾರು



ಹಾಗೂ ಹಲವು ತಿರುವುಗಳಿಂದ ಕೂಡಿರುವುದರಿಂದ ಇಲ್ಲಿ ವಂದೇ ಭಾರತ್ ರೈಲಿನ ಸಂಚಾರದ ಸುರಕ್ಷತೆ ಮತ್ತು ತಾಂತ್ರಿಕ ಸಾಮರ್ಥ್ಯವನ್ನು ಪರೀಕ್ಷಿಸುವುದು ಪ್ರಮುಖವಾಗಿತ್ತು. ರೈಲ್ವೆ ಮಾರ್ಗದ ವಿದ್ಯುದ್ದೀಕರಣ ಕಾಮಗಾರಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಪ್ರಾಯೋಗಿಕ ಸಂಚಾರ ನಡೆಸಲಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದ್ದಾರೆ.

ಸುಮಾರು 20 ಬೋಗಿಗಳನ್ನು ಹೊಂದಿರುವ ರೈಲಿನಲ್ಲಿ ಒಂದೇ ಬಾರಿ 1,080 ಪ್ರಯಾಣಿಕರು ಸಂಚರಿಸಬಹುದಾಗಿದೆ. ಘಾಟ್ ಪ್ರದೇಶದಲ್ಲಿ ಸುರಕ್ಷಿತ ಸಂಚಾರಕ್ಕೆ ನೆರವಾಗುವ ಅತ್ಯಾಧುನಿಕ ತುರ್ತು ಸ್ವಯಂಚಾಲಿತ ಬ್ರೇಕ್ ವ್ಯವಸ್ಥೆಯನ್ನೂ ರೈಲಿನಲ್ಲಿ ಅಳವಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಬೆಂಗಳೂರು, ಹಾಸನ ಹಾಗೂ ಕರಾವಳಿ ಭಾಗದ ಪ್ರಯಾಣಿಕರಿಗೆ ವೇಗದ ಮತ್ತು ಆರಾಮದಾಯಕ ರೈಲು ಸಂಪರ್ಕ ಕಲ್ಪಿಸುವ ನಿರೀಕ್ಷೆ ಈ ಬೆಳವಣಿಗೆಯಿಂದ ಹೆಚ್ಚಾಗಿದೆ. ಪ್ರಾಯೋಗಿಕ ಸಂಚಾರ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ರೈಲನ್ನು ನಿಯಮಿತವಾಗಿ ಸಾರ್ವಜನಿಕರ ಸೇವೆಗೆ ಪರಿಚಯಿಸುವ ಸಾಧ್ಯತೆಯಿದ್ದು, ಈ ಭಾಗದ ಪ್ರಯಾಣಿಕರು ಕಾತರದಿಂದ ಕಾಯುತ್ತಿದ್ದಾರೆ.

## ಆಫ್ ರೋಡ್ ಸಾಹಸ: ಜಲಮೂಲ, ಗ್ರಾಮೀಣ ರಸ್ತೆ ಹಾಳಾದರೆ ಕ್ರಮ: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಸಾಹಸಿಗರ ಸಂಸ್ಥೆಯೊಂದು ಆ.15, 16ರಂದು ಕುದುರೆಮುಖದಲ್ಲಿ ಆಫ್ ರೋಡ್ ಸಾಹಸ ಆಯೋಜಿಸಿದ್ದು, ಇದರಿಂದ ಜಲಮೂಲ ಕಲುಷಿತವಾದರೆ ಮತ್ತು ಗ್ರಾಮೀಣ ರಸ್ತೆ ನಾಶವಾದರೆ ಕಠಿಣ ಕ್ರಮ ಜರುಗಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.



ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಆ.15, 16ರಂದು ಚಿಕ್ಕಮಗಳೂರು ಜಿಲ್ಲೆ ಕುದುರೆಮುಖದಲ್ಲಿ ಆಫ್ ರೋಡ್ ಅಡ್ವೆಂಚರ್ ನಡೆಸುತ್ತಿರುವುದಾಗಿ ಬೆಂಗಳೂರಿನ ಒಂದು ಸಂಸ್ಥೆ ಪ್ರಚಾರ ಮಾಡಿದ್ದು, ಈ ಆಫ್ -ರೋಡ್ ನಲ್ಲಿ ನದಿಗಳನ್ನು ದಾಟುವ, ಮಣ್ಣು ದಾರಿಯಲ್ಲಿ ಸಾಗುವ, ಬೆಟ್ಟ ಗುಡ್ಡ ಹತ್ತಿ ಇಳಿಯುವ ಸಾಹಸದ ಅವಕಾಶವಿದೆ ಎಂದು ಹೇಳಿಕೊಂಡಿದೆ.

ದೇಶದ ಪವಿತ್ರ ಸಂವಿಧಾನ ವಿಧಿ 51ಎ(ಜಿ)ರಲ್ಲಿರುವ "ಭಾರತದ ಪ್ರಜೆಯಾಗಿ ನಾನು ಅರಣ್ಯ, ಸರೋವರ, ನದಿ, ವನ್ಯಜೀವಿಗಳು ಸೇರಿದಂತೆ ನೈಸರ್ಗಿಕ ಪರಿಸರವನ್ನು ರಕ್ಷಿಸುತ್ತೇನೆ ಮತ್ತು ಸುಧಾರಿಸುತ್ತೇನೆ. ಭಾರತದ ಸಂವಿಧಾನದ ಆಶಯದಂತೆ ನಾನು ಜೀವಂತ ಜೀವಿಗಳ ಬಗ್ಗೆ ಸಹಾನುಭೂತಿ ಹೊಂದಿರುತ್ತೇನೆ' ಎಂಬ ಅಂಶವನ್ನು ಉಲ್ಲೇಖಿಸಿ, ನದಿ, ಪರಿಸರ ರಕ್ಷಣೆ ಪ್ರತಿಯೊಬ್ಬರ ಹೊಣೆ ಎಂದು ತಿಳಿಸಿದ್ದಾರೆ.

ಈ ಸಾಹಸದಲ್ಲಿ ಬಳಸಲಾಗುವ ವಾಹನಗಳಿಗೆ ಪರಿವರ್ತಿತ (ಮಾಡಿಫೈಡ್) ದಪ್ಪ ಟೈರ್ ಗಳನ್ನು ಹಾಕುವ ಕಾರಣ ಮತ್ತು ಆ ವಾಹನಗಳು ಮಳೆಯಿಂದ ತೊಯ್ದ ರಸ್ತೆಯಲ್ಲಿ ಅತಿ ರಭಸದಿಂದ ಸಾಗುವ ಕಾರಣ ಗ್ರಾಮೀಣ ರಸ್ತೆಗಳು ಹಾಳಾಗುವ ಅಪಾಯ ಇರುವುದಲ್ಲದೆ, ಬೆಟ್ಟ ಗುಡ್ಡಗಳ ಮೇಲಿನ ಮೇಲ್ಮೈ ಪದರ ಸವಕಳಿಯಾಗಿ ಮಳೆ ಬಂದಾಗ ಕೊಚ್ಚಿಕೊಂಡು ಬಂದು ಕೆರೆ, ಕಟ್ಟೆ, ಸರೋವರ ಇತ್ಯಾದಿ ಜಲ ಮೂಲಗಳಲ್ಲಿ ಹೂಳು ಹೆಚ್ಚಾಗಿ ನೀರಿನ ಸಂಗ್ರಹಣಾ ಸಾಮರ್ಥ್ಯ ಕಡಿಮೆಯಾಗುತ್ತದೆ ಎಂದೂ ತಿಳಿಸಿದ್ದಾರೆ.

ಈ ನಿಟ್ಟಿನಲ್ಲಿ ಕುಡಿಯುವ ನೀರು ಪೂರೈಸುವ ಜಲ ಮೂಲಗಳಾದ ನದಿ, ತೊರೆ, ಕಾಲುವೆಗಳಲ್ಲಿ ಯಾವುದೇ ಸಾಹಸಿ ವಾಹನ ಸಂಚರಿಸಿ ನೀರು ಕಲುಷಿತಗೊಳಿಸದಂತೆ ಮತ್ತು ಗ್ರಾಮೀಣ ರಸ್ತೆಗಳು ಹಾಳಾಗದಂತೆ ಕ್ರಮ ವಹಿಸಲು, ಒಂದೊಮ್ಮೆ ರಸ್ತೆ ಹಾಳಾದರೆ, ಜಲಮೂಲ ಕಲುಷಿತವಾದರೆ ನಿರ್ದಾಕ್ಷಿಣ್ಯವಾಗಿ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪಂಚಾಯತಿ ಸಿಇಓ ಅವರಿಗೆ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.



ನವಿಮುಂಬೈನಲ್ಲಿ ಪೂಜ್ಯ ಪುತ್ತಿಗೆ ಶ್ರೀಪಾದರಿಂದ ಚಾತುರ್ಮಾಸ್ಯ ವ್ರತ ಸ್ವೀಕಾರ. ಭಕ್ತಜನರ ಅಪೇಕ್ಷೆಯಂತೆ ಪರಮಪೂಜ್ಯ ಪುತ್ತಿಗೆ ಮಠಾಧೀಶರಾದ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಇಂದು ನವಿಮುಂಬೈನ ಶ್ರೀ ಪುತ್ತಿಗೆ ಶಾಖಾ ಮಠದಲ್ಲಿ ತಮ್ಮ 53ನೇ ಚಾತುರ್ಮಾಸ್ಯ ವ್ರತವನ್ನು ವಿಧಿಪೂರ್ವಕವಾಗಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದು, ಶ್ರೀಪಾದರ ದರ್ಶನ ಪಡೆದು ಆಶೀರ್ವಾದ ಸ್ವೀಕರಿಸಿದರು.

## ಬಾಬ್ ಅಲ್-ಮಂಡೇಬ್‌ನಲ್ಲಿ ಕ್ಷಿಪಣಿ ದಾಳಿ: 6 ಸಾವು



● ವಿಕ್ರಮ ವಾಹಿನಿ । ಅಡೆನ್

ಕೆಂಪು ಸಮುದ್ರದ ಬಾಬ್ ಅಲ್-ಮಂಡೇಬ್ ಜಲಸಂಧಿಯಲ್ಲಿ ಆಹಾರ ಸಾಗಿಸುತ್ತಿದ್ದ 'ತಿಹಾಮಾ' ವಾಣಿಜ್ಯ ಹಡಗಿನ ಮೇಲೆ ಮೂರು ಬ್ಯಾಲಿಸ್ಟಿಕ್ ಕ್ಷಿಪಣಿಗಳ ದಾಳಿ ನಡೆದಿದ್ದು, ಆರು ಮಂದಿ ಮೃತಪಟ್ಟಿದ್ದಾರೆ. ಇರಾನ್ ಬೆಂಬಲಿತ ಹೌತಿ ಬಂಡುಕೋರರು ದಾಳಿ ನಡೆಸಿದ್ದಾರೆ ಎಂದು ಯೆಮೆನ್ ಸರ್ಕಾರ ಆರೋಪಿಸಿದೆ.

ದಾಳಿಯಲ್ಲಿ ಇಬ್ಬರು ರಕ್ಷಣಾ ಸಿಬ್ಬಂದಿ, ಮೂವರು ಪಾಕಿಸ್ತಾನಿ ಹಾಗೂ ಓರ್ವ ಇಂಡೋನೇಷ್ಯಾ ಪ್ರಜೆ ಮೃತಪಟ್ಟಿದ್ದಾರೆ. ನಾಲ್ವರು ಸಿಬ್ಬಂದಿ ಗಾಯಗೊಂಡಿದ್ದಾರೆ. ರಕ್ಷಣಾ ಕಾರ್ಯಾಚರಣೆ ವೇಳೆ ಮತ್ತೊಮ್ಮೆ ದಾಳಿ ನಡೆಸಲಾಗಿದೆ ಎಂದು ಯೆಮೆನ್ ಸರ್ಕಾರ ತಿಳಿಸಿದೆ. ಘಟನೆಯ ಕುರಿತು ತನಿಖೆ ಮುಂದುವರಿದಿದೆ.

ಹಡಗಿಗೆ ದಾಳಿ ನಡೆಸಿದ ಬಳಿಕ ಬೆಂಕಿ ಕಾಣಿಸಿಕೊಂಡಿದ್ದು, ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿ ಸಿಬ್ಬಂದಿಯನ್ನು ರಕ್ಷಿಸುವ ಕಾರ್ಯಾಚರಣೆ ನಡೆಸಿವೆ. ಹಡಗು ತಾಂಜಾನಿಯಾ ಧ್ವಜದಡಿ ಸಂಚರಿಸುತ್ತಿದ್ದು, ಈಜಿಪ್ಟ್ ಮತ್ತು ಯೆಮೆನ್‌ನಲ್ಲಿ ನೋಂದಾಯಿತ ಕಂಪನಿಗಳ ಮಾಲೀಕತ್ವದಲ್ಲಿದೆ ಎಂದು ಸಾಗರ ಸಂಚಾರದ ಮಾಹಿತಿ ತಿಳಿಸಿದೆ.


## ವಾಹನದ ಇಂಧನಕ್ಕಿರುವ ಕಾಳಜಿ, ನಿಮ್ಮ ಆಹಾರಕ್ಕೂ ಇರಲಿ!

● ವಿಕ್ರಮ ವಾಹಿನಿ । ಗೋಕರ್ಣ

ಅಗ್ನಿಯ ಪ್ರತಿಬಿಂಬವೇ ನಮ್ಮ ಶರೀರವಾಗಿದ್ದು, ಅಗ್ನಿಯ ಸೌಖ್ಯವೇ ನಮ್ಮ ಸೌಖ್ಯವಾಗಿರುತ್ತದೆ. ದೇಹದಲ್ಲಿ ಅಗ್ನಿ ಶಾಂತವಾದರೆ ಮರಣ, ಅಗ್ನಿ ಕೆಟ್ಟರೆ ರೋಗ ಹಾಗೂ ಅಗ್ನಿ ಸರಿಯಾಗಿದ್ದರೆ ನಿರೋಗಿಯಾಗಿ ದೀರ್ಘಾಯುಷಿಯಾಗಿ ಬಾಳಲು ಸಾಧ್ಯ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ತಿಳಿಸಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 12.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ 'ಜಠರಾಗ್ನಿ'ಯ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಅಗ್ನಿ ಇದ್ದಂತೆ ನಾವಿರುತ್ತೇವೆ. ಹಾಗಾಗಿ ಜಠರಾಗ್ನಿಗೆ ನಾವು ಏನನ್ನು? ಹೇಗೆ? ಹಾಗೂ ಯಾವಾಗ ನೀಡುತ್ತೇವೆ ಎನ್ನುವುದು ಮುಖ್ಯವಾಗಿದ್ದು, ಇದರ ಆಧಾರದಂತೆ ನಮ್ಮ ಶರೀರದ ಸ್ವಾಸ್ಥ್ಯ ನಿಂತಿದೆ. ವಾಹನಕ್ಕೂ ದೇಹಕ್ಕೂ ಹೋಲಿಕೆಯನ್ನು ಮಾಡಬಹುದಾಗಿದ್ದು, ಇಂಧನವು ಅಗ್ನಿಯಾಗಿ ಎಲ್ಲಾ ರೀತಿಯ ವಾಹನಗಳ ಚಾಲನೆಗೆ ಶಕ್ತಿಯಾಗಿ, ಚಲಿಸುವ ಶಕ್ತಿಯನ್ನು ನೀಡುತ್ತದೆ. ಹಾಗೆಯೇ ದೇಹಕ್ಕೆ ಬೇಕಾದ ಶಕ್ತಿಯನ್ನು ಆಹಾರವೆಂಬ ಇಂಧನ ನೀಡುತ್ತದೆ. ವಾಹನದಲ್ಲಿ ಇಂಧನ ಮಾಧ್ಯಮವಾಗಿ ಮಾತ್ರ ಕೆಲಸ ಮಾಡುತ್ತದೆ. ಆದರೆ ದೇಹದಲ್ಲಿ ಆಹಾರವೆಂಬ ಇಂಧನ ನಮ್ಮೊಳಗೆ ನಾವೇ ಆಗಿ ಪರಿವರ್ತಿತವಾಗುತ್ತದೆ. ವಾಹನದಲ್ಲಿ ಶಕ್ತಿಯೆಂಬ ಅಗ್ನಿಯನ್ನು ನಿಲ್ಲಿಸಿ, ಮತ್ತೆ ಪುನರಾರಂಭಿಸಬಹುದು. ಆದರೆ ದೇಹದಲ್ಲಿ ಅಗ್ನಿ ಸ್ಥಬ್ಧವಾದರೆ ಪುನಃ ಅದು ಕೆಲಸ ಮಾಡುವುದಿಲ್ಲ. ಹಾಗಾಗಿ ದೇಹಾಗ್ನಿಯ ವಿಚಾರದಲ್ಲಿ ಅತಿಯಾದ ಕಾಳಜಿ ಅತ್ಯಗತ್ಯ ಎಂದರು.

ದೇಹದಲ್ಲಿ ಮನಸ್ಸಿಗೂ ಅಗ್ನಿಗೂ ಗಾಢವಾದ ಸಂಬಂಧವಿದ್ದು, ಅಗ್ನಿ



ಹಾಗೂ ಮನಸ್ಸುಗಳೆರಡೂ ಒಂದೇ ನಾಣ್ಯದ ಎರಡು ಮುಖಗಳಂತೆ ಕಾರ್ಯನಿರ್ವಹಿಸುತ್ತದೆ. ಆದರೆ ವಾಹನದಲ್ಲಿ ಯಾಂತ್ರಿಕತೆ ಮಾತ್ರವಿದೆ. ವಾಹನದಲ್ಲಿ ಇಂಧನದ ಜೊತೆಗೆ ಗಾಳಿಯ ಸಹಕಾರವೂ ಬೇಕು ಹಾಗೆಯೇ ದೇಹದಲ್ಲೂ ಪ್ರಾಣಶಕ್ತಿಯ ಸಹಕಾರ ಅಗತ್ಯ.

ವಾಹನವು ಇಂಧನವನ್ನು ಬಳಸಿಕೊಂಡು ದೇಶ ವಿದೇಶಗಳ ಸಂಚಾರವನ್ನು ಮಾಡಬಹುದು. ಆದರೆ ದೇಹಕ್ಕೆ ಸರಿಯಾದ ಆಹಾರವೇಂಬ ಇಂಧನವನ್ನು ಒದಗಿಸಿದಾಗ ಅದು ಇಂದಿನ ವಿಜ್ಞಾನ ತಲುಪದ ಲೋಕಗಳಿಗೂ ನಾವು ಪ್ರಯಾಣಿಸಬಹುದು ಎಂದು ಸಮರ್ಪಕ ಆಹಾರದ ಮಹತ್ವವನ್ನು ವಿವರಿಸಿದರು.

ಪ್ರಾಚೀನರ ಸಂಶೋಧನೆಗಳು ಅಂತರ್ಮುಖವಾದರೆ, ಇಂದಿನ



**ವಾಹನಕ್ಕೆ ಇಂಧನವನ್ನು ತುಂಬಿಸುವಾಗ ಯಾವ ಜಾಗ್ರತೆಯನ್ನು ವಹಿಸುತ್ತೇವೆಯೋ, ಕನಿಷ್ಠ ಅಷ್ಟಾದರೂ ಜಾಗ್ರತೆಯನ್ನು ಆಹಾರವನ್ನು ಸ್ವೀಕರಿಸುವಾಗ ವಹಿಸಬೇಕು. ದೇಹವು ಆರೋಗ್ಯ ವಾಗಿದ್ದರೆ ನೂರು ವಾಹನಗಳನ್ನು ಕೊಳ್ಳಬಹುದು. ಆದರೆ ದೇಹವೆಂಬ ವಾಹನ ಕೆಟ್ಟು ನಿಂತರೆ ಸರಿಪಡಿಸುವುದು ಬಹಳ ಕಷ್ಟ**

**- ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು, ಶ್ರೀ ರಾಮಚಂದ್ರಾಪುರ ಮಠ**

ಸಂಶೋಧನೆಗಳು ಬಾಹ್ಯಕ್ಕೆ ಸಂಬಂಧಿಸಿದ್ದು. ಯಾವುದು ದೇಹದಲ್ಲಿ ಇದೆಯೋ ಅದೇ ಬ್ರಹ್ಮಾಂಡದಲ್ಲಿ ಇದೆ ಎಂಬ ಮಾತಿದ್ದು, ಕೇವಲ ನಾಡಿಯನ್ನು ನೋಡಿ ನಕ್ಷತ್ರ ವಾರಾದಿಗಳನ್ನು ತಿಳಿದುಕೊಳ್ಳಲು ಸಾಧ್ಯ. ನಮ್ಮ ಪೂರ್ವಜರು ಅಂತರಂಗದ ಮೂಲಕವೇ ಬಹಿರಂಗದ ವಿಷಯಗಳನ್ನು ತಿಳಿದುಕೊಂಡಿದ್ದರು ಎಂದು ಪ್ರಾಚೀನ ಭಾರತದ ವಿಜ್ಞಾನವನ್ನು ಪ್ರಶಂಸಿಸಿದರು.

ಕುಮಟಾ ಹವ್ಯಕ ಮಂಡಲದ ಧಾರೇಶ್ವರ, ವಾಲಗಳ್ಳಿ, ಕೆಕ್ಕಾರು, ಕುಮಟಾ, ಕಾರವಾರ ಅಂಕೋಲಾ ಹವ್ಯಕ ವಲಯಗಳ ಪರವಾಗಿ ನಾಗರಾಜ ನಾರಾಯಣ ಜೋಶಿ ದಂಪತಿಗಳು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಎಸ್. ವಿ.ಹೆಗಡೆ ಭದ್ರನ್, ಕೃಷ್ಣಾನಂದ ಹೊಳೆಗದ್ದೆ, ಜಿ. ಎಸ್. ಹೆಗಡೆ ಕುಮಟಾ, ಸ್ವಾತಿ ಭಾಗ್ವತ್, ವಾದಿರಾಜ ಸಾಮಗ, ದಿನ ಪ್ರಧಾನರಾದ ಪರಮೇಶ್ವರ ನಾರಾಯಣ ಭಟ್ಟ ದಂಪತಿಗಳು ಉಪಸ್ಥಿತರಿದ್ದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಇಮ್ರಾನ್ ಖಾನ್ ಬದುಕಿಲ್ಲವೇ?

● ವಿಕ್ರಮ ವಾಹಿನಿ । ಇಸ್ಲಾಮಾಬಾದ್

ಪಾಕಿಸ್ತಾನದ ಮಾಜಿ ಪ್ರಧಾನಿ ಹಾಗೂ ಪಾಕಿಸ್ತಾನ್ ತೆಹ್ರೀಕ್-ಇ-ಇನ್ಸಾಫ್ (ಪಿಟಿಐ) ಪಕ್ಷದ ಸಂಸ್ಥಾಪಕ ಇಮ್ರಾನ್ ಖಾನ್ ಜೈಲಿನಲ್ಲಿ ಮೃತಪಟ್ಟಿದ್ದಾರೆ ಎಂಬ ವದಂತಿ ಪಾಕಿಸ್ತಾನ ರಾಜಕೀಯದಲ್ಲಿ ಭಾರಿ ಸಂಚಲನ ಮೂಡಿಸಿದೆ. ಪಾಕಿಸ್ತಾನಿ ಪತ್ರಕರ್ತ ವಜಾಹತ್ ಸಯೀದ್ ಖಾನ್ ಅವರು ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ, ಇಮ್ರಾನ್ ಖಾನ್ ಜೀವಂತವಾಗಿಲ್ಲ ಎಂಬ ಆತಂಕವನ್ನು ಕೆಲವು ಮಿಲಿಟರಿ ಮೂಲಗಳು ವ್ಯಕ್ತಪಡಿಸಿವೆ ಎಂದು ಹೇಳಿಕೊಂಡಿದ್ದಾರೆ. ಆದರೆ, ಈ ಹೇಳಿಕೆಗೆ ನೇರ ದೃಢೀಕರಣವಿಲ್ಲ ಎಂದು ಅವರೇ ಸ್ಪಷ್ಟಪಡಿಸಿದ್ದಾರೆ.

ಇಮ್ರಾನ್ ಖಾನ್ ಅವರ ಕುಟುಂಬ, ಪಕ್ಷದ ನಾಯಕರು, ವಕೀಲರು ಹಾಗೂ ವೈಯಕ್ತಿಕ ವೈದ್ಯರಿಗೆ ಜೈಲಿನಲ್ಲಿ ಅವರನ್ನು ಭೇಟಿ ಮಾಡಲು ಅವಕಾಶ ಸಿಗದಿರುವುದು ಅವರ ಆರೋಗ್ಯದ ಬಗ್ಗೆ ಮತ್ತಷ್ಟು ಅನುಮಾನಗಳಿಗೆ ಕಾರಣವಾಗಿದೆ. ಈ ಹಿಂದೆ ಪಿಟಿಐ ಕೂಡ ಇಮ್ರಾನ್ ಅವರನ್ನು ಏಕಾಂಗಿಯಾಗಿ ಇರಿಸಿರುವುದು ಹಾಗೂ ಸೂಕ್ತ ವೈದ್ಯಕೀಯ ಚಿಕಿತ್ಸೆ ದೊರೆಯದಿರುವ ಬಗ್ಗೆ ಹಲವು ಬಾರಿ ಆತಂಕ ವ್ಯಕ್ತಪಡಿಸಿತ್ತು.

ಇಮ್ರಾನ್ ಖಾನ್ ಅವರ ಆರೋಗ್ಯ ಮತ್ತು ಸುರಕ್ಷತೆ ಕುರಿತು ಸ್ಪಷ್ಟ ಮಾಹಿತಿ ನೀಡುವಂತೆ ಪಕ್ಷದ ನಾಯಕರು ಒತ್ತಾಯಿಸುತ್ತಿದ್ದಾರೆ. ಖೈಬರ್ ಪಖ್ತುಂಖ್ವಾ ಮುಖ್ಯಮಂತ್ರಿ ಹಾಗೂ ಪಿಟಿಐ ನಾಯಕ ಸೊಹೈಲ್ ಅಫ್ರಿದಿ, ಇಮ್ರಾನ್ ಖಾನ್ ಅವರಿಗೆ ಏನಾದರೂ ಆಗಿದ್ದರೆ ಪಕ್ಷದ 20 ಲಕ್ಷಕ್ಕೂ ಅಧಿಕ ಕಾರ್ಯಕರ್ತರು ಬೀದಿಗಿಳಿಯಲು ಸಿದ್ಧರಾಗಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ. ಇದೇ ವೇಳೆ ಪಿಟಿಐ ಸೆಪ್ಟೆಂಬರ್ 27ರಂದು ಇಸ್ಲಾಮಾಬಾದ್‌ಗೆ ಬೃಹತ್ ಮೆರವಣಿಗೆ ನಡೆಸುವುದಾಗಿ ಘೋಷಿಸಿದೆ. ಇಮ್ರಾನ್ ಖಾನ್ ಅವರ ಸಾವಿನ ಕುರಿತು ಯಾವುದೇ ಅಧಿಕೃತ ದೃಢೀಕರಣ ಹೊರಬಂದಿಲ್ಲವಾದರೂ, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುದ್ದಿಯಿಂದ ಪಾಕಿಸ್ತಾನದ ರಾಜಕೀಯ ವಲಯದಲ್ಲಿ ಆತಂಕ ಹೆಚ್ಚಾಗಿದೆ.

2023ರ ಆಗಸ್ಟ್‌ನಿಂದ ಜೈಲಿನಲ್ಲಿರುವ ಇಮ್ರಾನ್ ಖಾನ್ ಹಲವು ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಯಾಗಿದ್ದಾರೆ. ಅವರ ಬಂಧನದ ಬಳಿಕ ಪಾಕಿಸ್ತಾನದ ಮಿಲಿಟರಿ ವ್ಯವಸ್ಥೆ ಹಾಗೂ ಇಮ್ರಾನ್ ಬೆಂಬಲಿಗರ ನಡುವಿನ ಸಂಘರ್ಷ ಮುಂದುವರಿದಿದ್ದು, ಇದೀಗ ಅವರ ಆರೋಗ್ಯದ ಕುರಿತ ವದಂತಿಗಳು ರಾಜಕೀಯ ಪರಿಸ್ಥಿತಿಯನ್ನು ಮತ್ತಷ್ಟು ಬಿಗಿಗೊಳಿಸುವ ಸಾಧ್ಯತೆ ಇದೆ.

## ಪಾದ್ರಿ ವಿರುದ್ಧ ಪೋಕ್ಸೋ ಕೇಸ್

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

13 ವರ್ಷದ ಬಾಲಕಿಗೆ ಮೂರು ತಿಂಗಳಿನಿಂದ ಲೈಂಗಿಕ ಕಿರುಕುಳ ನೀಡಿದ ಆರೋಪದಡಿ ಚರ್ಚ್ ಪಾದ್ರಿಯೊಬ್ಬರ ವಿರುದ್ಧ ವಿಶ್ವನಾಥಪುರ ಠಾಣೆಯಲ್ಲಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ದೇವನಹಳ್ಳಿ ತಾಲೂಕಿನ ಹಾಸ್ಟೆಲ್‌ನಲ್ಲಿ ವಾಸವಿದ್ದ ಬಾಲಕಿಗೆ ಶೌಚಾಲಯ ಸ್ವಚ್ಛಗೊಳಿಸಲು ಕಳುಹಿಸಿ, ಹಿಂದಿನಿಂದ ಬಂದು ಪಾದ್ರಿ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಲಾಗಿದೆ. ಐದಕ್ಕೂ ಹೆಚ್ಚು ಬಾರಿ ಕಿರುಕುಳ ನೀಡಲಾಗಿದೆ ಎಂದು ಬಾಲಕಿ ತನ್ನ ಚಿಕ್ಕಮ್ಮನಿಗೆ ತಿಳಿಸಿದ್ದಾಳೆ ಎನ್ನಲಾಗಿದೆ.

ಬಳಿಕ ಪೋಷಕರಿಗೆ ವಿಷಯ ತಿಳಿದು ಹಾಸ್ಟೆಲ್‌ಗೆ ತೆರಳಿ ವಿಚಾರಿಸಿದಾಗ ಪಾದ್ರಿ ಪೋಷಕರನ್ನೇ ಪ್ರಶ್ನಿಸಿ ಬೈದಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಬಾಲಕಿಯ ಹೇಳಿಕೆ ಆಧರಿಸಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ. ಪೊಲೀಸರು ಬಾಲಕಿಯ ಹೇಳಿಕೆ ಹಾಗೂ ಕುಟುಂಬಸ್ಥರಿಂದ ಪಡೆದ ಮಾಹಿತಿಯ ಆಧಾರದ ಮೇಲೆ ಪ್ರಕರಣದ ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಹಾಸ್ಟೆಲ್‌ನಲ್ಲಿರುವ ಸಿಬ್ಬಂದಿ ಹಾಗೂ ಇತರರಿಂದಲೂ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಘಟನೆ ಬಳಿಕ ಬಾಲಕಿಯ ಕುಟುಂಬಸ್ಥರು ಆತಂಕಗೊಂಡಿದ್ದು, ಪ್ರಕರಣದ ಕುರಿತು ಪೊಲೀಸರು ಹೆಚ್ಚಿನ ವಿಚಾರಣೆ ನಡೆಸಿ ಸತ್ಯಾಸತ್ಯತೆ ಪತ್ತೆಹಚ್ಚುವ ಕಾರ್ಯ ಮುಂದುವರಿಸಿದ್ದಾರೆ.



ಕರ್ನಾಟಕ ವಿಧಾನ ಪರಿಷತ್ತಿನ159ನೇ ಅಧಿವೇಶನವು ಪ್ರಾರಂಭವಾಗುತ್ತಿರುವ ಹಿನ್ನೆಲೆಯಲ್ಲಿ, ವಿಧಾನ ಪರಿಷತ್ತಿನ ಅಂಗಾಮಿ ಸಭಾಪತಿ ಪುಟ್ಟಣ್ಣ ಅವರು ಬೆಂಗಳೂರು ವಿಧಾನ ಸೌಧದಲ್ಲಿ ಮಾಧ್ಯಮಗೋಷ್ಠಿ ನಡೆಸಿ, ಅಧಿವೇಶನದ ಪೂರ್ವ ಸಿದ್ಧತೆಗಳನ್ನು ಪರಿಶೀಲನೆ ನಡೆಸಿದರು.

# ಮುನಿಯಪ್ಪಗೆ ಸಮಾಜ ಕಲ್ಯಾಣ ಖಾತೆ: ಮಾದಿಗ ಮಹಾಸಭೆ ಅಭಿನಂದನೆ

● ವಿಕ್ರಮ ವಾಹಿನಿ । ಬೆಂಗಳೂರು

ಹಿರಿಯ ಕಾಂಗ್ರೆಸ್ ನಾಯಕ ಕೆ.ಹೆಚ್. ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಇಲಾಖೆಯ ಜವಾಬ್ದಾರಿ ನೀಡಿರುವುದನ್ನು ಕರ್ನಾಟಕ ಮಾದಿಗ ಮಹಾಸಭೆ ಹಾಗೂ ವಿವಿಧ ಸಂಘ-ಸಂಸ್ಥೆಗಳು ಸ್ವಾಗತಿಸಿವೆ. ಈ ಮೂಲಕ ಸಾಮಾಜಿಕ ನ್ಯಾಯಕ್ಕೆ ಮತ್ತಷ್ಟು ಬಲ ದೊರೆಯಲಿದೆ ಎಂದು ಸಂಘಟನೆಗಳು ಅಭಿಪ್ರಾಯಪಟ್ಟಿವೆ.



ಮುನಿಯಪ್ಪ ಅವರ ದೀರ್ಘಕಾಲದ ರಾಜಕೀಯ ಹಾಗೂ ಆಡಳಿತ ಅನುಭವವನ್ನು ಪರಿಗಣಿಸಿ ಮಹತ್ವದ ಖಾತೆ ನೀಡಿರುವುದು ಸೂಕ್ತ ನಿರ್ಧಾರವಾಗಿದೆ ಎಂದು ಮಹಾಸಭೆ ತಿಳಿಸಿದೆ. ಸಮಾಜದ ಎಲ್ಲ ವರ್ಗಗಳ ಹಿತ ಕಾಪಾಡುವ ನಾಯಕತ್ವ ಅವರಿಂದ ನಿರೀಕ್ಷಿಸಲಾಗಿದೆ ಎಂದು ಹೇಳಿದೆ.

ಮಾದಿಗ ಸಮುದಾಯದ ಬಹುಕಾಲದ ಬೇಡಿಕೆಗೆ ಸ್ಪಂದಿಸಿರುವ ಕಾಂಗ್ರೆಸ್ ವರಿಷ್ಠರಿಗೆ ಮಹಾಸಭೆ ಕೃತಜ್ಞತೆ ಸಲ್ಲಿಸಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಪಕ್ಷದ ಹಿರಿಯ ನಾಯಕರಿಗೆ ಅಭಿನಂದನೆ ಸಲ್ಲಿಸಲಾಗಿದೆ.

ಸಾಮಾಜಿಕ ನ್ಯಾಯ, ಶಿಕ್ಷಣ, ಉದ್ಯೋಗ ಹಾಗೂ ಆರ್ಥಿಕ ಸಬಲೀಕರಣಕ್ಕೆ ಆದ್ಯತೆ ನೀಡಿ ಅವಕಾಶವಂಚಿತ ಸಮುದಾಯಗಳ ಅಭಿವೃದ್ಧಿಗೆ ಮುನಿಯಪ್ಪ ಅವರು ಶ್ರಮಿಸಲಿದ್ದಾರೆ ಎಂಬ ವಿಶ್ವಾಸವಿದೆ ಎಂದು ಮಹಾಸಭೆ ಹೇಳಿದೆ.

# ಆ.16ರಂದು ಶ್ರೀ ವಿದ್ಯಾವಲ್ಲಭಮಾಧವ ತೀರ್ಥರ ವರ್ಧಂತಿ ಮಹೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು


ಪರಮಪೂಜ್ಯ 1008 ಶ್ರೀವಿದ್ಯಾಸಾಗರ ಮಾಧವ ತೀರ್ಥರ ಕರಕಮಲ ಸಂಜಾತರಾದ, ಶ್ರೀಮನ್ಮಾಧವ ತೀರ್ಥ ಮಠದ ಪ್ರಸ್ತುತ ಪೀಠಾಧಿಪತಿಗಳಾದ ಪರಮಪೂಜ್ಯ 1008 ಶ್ರೀವಿದ್ಯಾವಲ್ಲಭಮಾಧವ ತೀರ್ಥ ಶ್ರೀಪಾದಂಗಳವರ 85ನೇ ವರ್ಷದ ವರ್ಧಂತಿ ಮಹೋತ್ಸವ ಇದೇ ಆಗಸ್ಟ್ 16 ರಂದು ವಿಜೃಂಭಣೆಯಿಂದ ಜರುಗಲಿದೆ.

ಕಾಕೋಳಿನ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ಪರಮಪೂಜ್ಯ ಶ್ರೀಪಾದಂಗಳವರ 85ನೇ ವರ್ಷದ ವರ್ಧಂತಿ ಮಹೋತ್ಸವದ ಅಂಗವಾಗಿ ರೌದ್ರಿ ಶಾಂತಿ ಕಾರ್ಯಕ್ರಮವನ್ನು ಭಕ್ತಿಭಾವಪೂರ್ವಕವಾಗಿ ಆಯೋಜಿಸಲಾಗಿದೆ. ಪ್ರಾತಃಕಾಲ 8ಕ್ಕೆ ಹೋಮ ಹವನ



ಪ್ರಾರಂಭವಾಗಲಿದ್ದು ಮಧ್ಯಾಹ್ನ 12ಕ್ಕೆ ಪೂರ್ಣಾಹುತಿ, ನಂತರ 12-30ಕ್ಕೆ ತೀರ್ಥ ಪ್ರಸಾದ ವಿನಿಯೋಗ ಇರಲಿದೆ.

ಈ ಪಾವನ ಕಾರ್ಯಕ್ರಮಕ್ಕೆ ಸಮಸ್ತ ಭಕ್ತಾದಿಗಳು, ಶಿಷ್ಯವೃಂದ ಸಕುಟುಂಬ ಸಮೇತರಾಗಿ ಆಗಮಿಸಿ ಶ್ರೀಮದ್ವೀರರಾಮಚಂದ್ರ ದೇವರ ಹಾಗೂ ಶ್ರೀಪಾದಂಗಳವರ ಅನುಗ್ರಹಕ್ಕೆ ಪಾತ್ರರಾಗುವಂತೆ ಸಂಘಟಕರು ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಬಿಎಸ್ ಕೃಷ್ಣ ಮೂರ್ತಿ-9141826180, ಕೆಎಸ್ ವೆಂಕಟೇಶ್



ಮೂರ್ತಿ - 9844616353, ಬಿಜಿ ಸುದರ್ಶನಚಂದ್ರ - 70194 29651 ಮತ್ತು ಅರುಣ್ ಕುಮಾರ್ - 9731270001 ಇವರನ್ನು ಸಂಪರ್ಕಿಸಬಹುದು.

# ಖಾಲಿ ನಿವೇಶನಗಳ ಶುಚಿತ್ವದ ಗಡುವಿನ ವಿಸ್ತರಣೆ

● ವಿಕ್ರಮ ವಾಹಿನಿ । ಬೆಂಗಳೂರು

"ತ್ಯಾಜ್ಯದಿಂದ ಸ್ವಾತಂತ್ರ್ಯ" (ಫ್ರೀಡಂ ಫ್ರಮ್ ವೇಸ್ಟ್) ಅಭಿಯಾನದಡಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವು (ಜಿಬಿಎ), ಬಿಡಿಎ, ಬೆಸ್ಕಾಂ, ಕೆ-ರೈಡ್, ಬಿಎಂಆರ್‌ಸಿಎಲ್ ಮತ್ತು ಕೆಐಎಡಿಬಿ ಸಂಸ್ಥೆಗಳ ಸಮನ್ವಯದೊಂದಿಗೆ ಬೆಂಗಳೂರನ್ನು ಸುಂದರಗೊಳಿಸಲು ಹಾಗೂ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸಲು ತನ್ನ ಪ್ರಯತ್ನಗಳನ್ನು ಚುರುಕುಗೊಳಿಸಿದೆ.

ಈ ಅಭಿಯಾನದ ಭಾಗವಾಗಿ, ಸಾರ್ವಜನಿಕ ಸ್ಥಳಗಳಲ್ಲಿ ಅಕ್ರಮವಾಗಿ ಸುರಿಯಲಾಗಿರುವ ಕಟ್ಟಡ ತ್ಯಾಜ್ಯ (ಡೆಬ್ರಿಸ್), ಬೆಳೆದಿರುವ ಕಳೆ ಗಿಡಗಳು ಮತ್ತು ಇತರ ತ್ಯಾಜ್ಯಗಳನ್ನು ತೆರವುಗೊಳಿಸಲು ನಗರದಾದ್ಯಂತ 100 ಟ್ರಕ್‌ಗಳು ಹಾಗೂ 25 ಜೆಸಿಬಿ/ಎಸ್ಕವೇಟರ್‌ಗಳನ್ನು ನಿಯೋಜಿಸಲಾಗಿದೆ. ಇಲ್ಲಿಯವರೆಗೆ ಈ ಅಭಿಯಾನದ ಮೂಲಕ 30,000 ಟನ್‌ಗಳಿಗೂ ಹೆಚ್ಚು ತ್ಯಾಜ್ಯ ಮತ್ತು ಕಳೆ ಗಿಡಗಳನ್ನು ತೆರವುಗೊಳಿಸಲಾಗಿದೆ.

ಕಾಲುದಾರಿಗಳ ತೆರವು ಹಾಗೂ ವಾರಸುದಾರರಿಲ್ಲದ ವಾಹನಗಳ ತೆರವುಗೊಳಿಸುವಿಕೆಗೆ ಸಂಬಂಧಿಸಿದಂತೆ ಈಗಾಗಲೇ ಚಾಲನೆಯಲ್ಲಿರುವ ಅಭಿಯಾನಗಳ ಮುಂದುವರಿದ ಭಾಗವಾಗಿ, ಸಾರ್ವಜನಿಕ ಸ್ಥಳಗಳನ್ನು ಮರುಸ್ಥಾಪಿಸಿ ಬೆಂಗಳೂರನ್ನು ಹೆಚ್ಚು ಸ್ವಚ್ಛ, ಸುರಕ್ಷಿತ ಹಾಗೂ ಸಂಚಾರಕ್ಕೆ ಅನುಕೂಲಕರವಾಗಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಖಾಲಿ ನಿವೇಶನಗಳ ಮಾಲೀಕರು ತಮ್ಮ ಜಾಗದಲ್ಲಿ ಶೇಖರಣೆಯಾಗಿರುವ ಕಟ್ಟಡ ತ್ಯಾಜ್ಯ ಮತ್ತು ಬೆಳೆದಿರುವ ಕಳೆ ಗಿಡಗಳನ್ನು ಆದಷ್ಟು ಬೇಗ ತೆರವುಗೊಳಿಸಲು ಕೋರಲಾಗಿದೆ. ಬೆಂಗಳೂರಿನ ಒಟ್ಟಾರೆ ಸುಧಾರಣೆಗೆ ಖಾಸಗಿ ಆಸ್ತಿಗಳು ಹಾಗೂ ಸಾರ್ವಜನಿಕ ಸ್ಥಳಗಳೆರಡೂ ಸ್ವಚ್ಛವಾಗಿರುವುದು ಕಡ್ಡಾಯ.

ಖಾಲಿ ನಿವೇಶನಗಳನ್ನು ಮಾಲೀಕರೇ ಸ್ವಚ್ಛಗೊಳಿಸದಿದ್ದಲ್ಲಿ, ಪ್ರಾಧಿಕಾರವೇ ಖುದ್ದಾಗಿ ಸ್ವಚ್ಛತಾ ಕಾರ್ಯವನ್ನು ಕೈಗೊಂಡು, ಅದಕ್ಕೆ ತಗುಲುವ ವೆಚ್ಚವನ್ನು ಆಸ್ತಿ ಮಾಲೀಕರಿಂದಲೇ ವಸೂಲಿ ಮಾಡಲಾಗುವುದು ಎಂದು ಜಿಬಿಎ ಪ್ರಕಟಿಸಿದೆ.

ಈ ಕೆಲಸಕ್ಕೆ ಅನ್ವಯವಾಗುವ ದರಗಳನ್ನು ಸಹ ಜಿಬಿಎ ಪ್ರಕಟಿಸಿದೆ. ಕೆಲವು ಸಾರ್ವಜನಿಕರು ಈ ದರಗಳು ಹೆಚ್ಚಾಗಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಆದರೆ, ಈ ದರಗಳನ್ನು ಮನಸೋಇಚ್ಛೆ ನಿಗದಿಪಡಿಸಿಲ್ಲ ಎಂಬುದನ್ನು ಗಮನಿಸಬೇಕಾಗಿದೆ.

ಈ ದರಗಳು ಸರ್ಕಾರದ ನಿಯಮಾವಳಿಯ ದರಗಳ ಆಧಾರದ ಮೇಲಿರುತ್ತವೆ. ನಿವೇಶನ ಸ್ವಚ್ಛಗೊಳಿಸುವ ವೆಚ್ಚವನ್ನು ಪ್ಲಾಟ್‌ನ ಗಾತ್ರ, ತ್ಯಾಜ್ಯದ ಪ್ರಮಾಣ, ಇತರ ಕೆಲಸಗಳು ಹಾಗೂ ಸಾಗಣೆ ವೆಚ್ಚಗಳನ್ನು ಪರಿಗಣಿಸಿ ಲೆಕ್ಕಹಾಕಲಾಗುತ್ತದೆ.ಆಸ್ತಿ ಮಾಲೀಕರಿಗೆ ಈ ವೆಚ್ಚಗಳು ತೊಂದರೆಯಾಗಬಹುದು ಎಂಬುದನ್ನು ನಾವು ಅರ್ಥೈಸಿಕೊಳ್ಳುತ್ತೇವೆ.

ಆದರೆ ಇದಕ್ಕೆ ಸರಳ ಪರಿಹಾರವಿದೆ. ಆಸ್ತಿ ಮಾಲೀಕರು ಸಮಯಕ್ಕೆ ಸರಿಯಾಗಿ ಕ್ರಮ ಕೈಗೊಳ್ಳುವ ಮೂಲಕ ಈ ವೆಚ್ಚಗಳಿಂದ ಪಾರಾಗಬಹುದು: ಮಾಲೀಕರು ಖಾಸಗಿ ಗುತ್ತಿಗೆದಾರರನ್ನು ನೇಮಿಸಿಕೊಂಡು ತಮ್ಮ ಖಾಲಿ ನಿವೇಶನಗಳನ್ನು ತಾವೇ ಸ್ವಚ್ಛಗೊಳಿಸಿಕೊಳ್ಳಬಹುದು.

ಸಾಕಷ್ಟು ಸಂದರ್ಭಗಳಲ್ಲಿ, ಪ್ರಾಧಿಕಾರ ಅಥವಾ ಅದರ ಗುತ್ತಿಗೆದಾರರು ಕಾರ್ಯನಿರ್ವಹಿಸಿ ನಂತರ ವೆಚ್ಚ ವಸೂಲಿ ಮಾಡುವುದಕ್ಕಿಂತ, ಮಾಲೀಕರೇ ನೇರವಾಗಿ ಖಾಸಗಿ ಗುತ್ತಿಗೆದಾರರನ್ನು ನಿಯೋಜಿಸಿ ಕೆಲಸ ಮುಗಿಸಿಕೊಳ್ಳುವುದು ಗಮನಾರ್ಹವಾಗಿ ಕಡಿಮೆ ವೆಚ್ಚದಾಯಕವಾಗಿರುತ್ತದೆ.

ಆಸ್ತಿ ಮಾಲೀಕರು ತಮ್ಮ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸಲು ನೀಡಲಾಗಿದ್ದ ಮೂಲ ಗಡುವು ಆಗಸ್ಟ್ 15 ಆಗಿತ್ತು. ಹೆಚ್ಚಿನ ಸಮಯಾವಕಾಶ ನೀಡುವಂತೆ ಸಾರ್ವಜನಿಕರಿಂದ ಬಂದ ಮನವಿಗಳನ್ನು ಪರಿಗಣಿಸಿ, ಗಡುವನ್ನು ಆಗಸ್ಟ್ 22 ರವರೆಗೆ ವಿಸ್ತರಿಸಲಾಗಿದೆ.

ಎಲ್ಲಾ ಆಸ್ತಿ ಮಾಲೀಕರು ಈ ಹೆಚ್ಚಿನ ಸಮಯಾವಕಾಶವನ್ನು ಬಳಸಿಕೊಂಡು ತಮ್ಮ ನಿವೇಶನಗಳನ್ನು ಸ್ವಚ್ಛಗೊಳಿಸಿ, ನಗರದಾದ್ಯಂತ ನಡೆಯುತ್ತಿರುವ ಈ ಸ್ವಚ್ಛತಾ ಕಾರ್ಯಕ್ರಮಕ್ಕೆ ಸಹಕರಿಸಬೇಕಾಗಿ ಮನವಿ ಮಾಡುತ್ತೇವೆ.

ಸಾರ್ವಜನಿಕ ಸ್ಥಳಗಳಿಂದ ತ್ಯಾಜ್ಯ ತೆರವುಗೊಳಿಸುವುದು ನಮ್ಮ ಹೊಣೆ. ಖಾಸಗಿ ಆಸ್ತಿಯನ್ನು ನಿರ್ವಹಿಸುವುದು ಆಸ್ತಿ ಮಾಲೀಕರ ಜವಾಬ್ದಾರಿ. ನಾವೆಲ್ಲರೂ ಕೈಜೋಡಿಸಿ ನಮ್ಮ ಪಾಲಿನ ಕರ್ತವ್ಯ ನಿರ್ವಹಿಸಿದಾಗ ಮಾತ್ರ ಬೆಂಗಳೂರು ಇನ್ನಷ್ಟು ಸುಂದರವಾಗಲು ಸಾಧ್ಯ.

ಸರ್ಕಾರಿ ಸಂಸ್ಥೆಗಳ ಸಮನ್ವಯದ ಕಾರ್ಯ ಮತ್ತು ನಾಗರೀಕರ ಸಕ್ರಿಯ ಭಾಗವಹಿಸುವಿಕೆಯ ಮೂಲಕ ನವ ಬೆಂಗಳೂರನ್ನು ನಿರ್ಮಿಸುವುದೇ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನದ ಅಂತಿಮ ಗುರಿಯಾಗಿದೆ.

# ಮುಂಬೈನಲ್ಲಿ ಭೂಕುಸಿತ: ಇಬ್ಬರು ಸಾವು, 6ರಿಂದ 8 ಮಂದಿ

## ಅವಶೇಷಗಳಡಿ ಸಿಲುಕಿರುವ ಶಂಕೆ

● ವಿಕ್ರಮ ವಾಹಿನಿ । ಮುಂಬೈ

ಮಹಾರಾಷ್ಟ್ರದಲ್ಲಿ ಭಾರಿ ಮಳೆ ಮುಂದುವರಿದಿದ್ದು, ಮುಂಬೈನ ಕುರ್ಲಾದಲ್ಲಿ ಭೂಕುಸಿತ ಸಂಭವಿಸಿ ಇಬ್ಬರು ಮೃತಪಟ್ಟಿದ್ದಾರೆ. 6ರಿಂದ 8 ಮಂದಿ ಅವಶೇಷಗಳಡಿ ಸಿಲುಕಿರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕುರ್ಲಾದ ಚಿರಾಗ್ ನಗರದ ಗೌಸಿಯಾ ಚಾಲ್‌ನಲ್ಲಿ ಬೆಳಗಿನ ಜಾವ 3.48ರ ಸುಮಾರಿಗೆ ಭೂಕುಸಿತ ಸಂಭವಿಸಿದೆ. ಘಟನೆ ತಿಳಿಯುತ್ತಿದ್ದಂತೆ ಅಗ್ನಿಶಾಮಕ ದಳ, ಪೊಲೀಸರು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಆಂಬ್ಯುಲೆನ್ಸ್ ಸೇವೆ ಹಾಗೂ ನಾಗರಿಕ ವಾರ್ಡ್ ಸಿಬ್ಬಂದಿಯ ತಂಡಗಳು ಸ್ಥಳಕ್ಕೆ ಧಾವಿಸಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಆರಂಭಿಸಿವೆ.

ಘಟನೆಯಲ್ಲಿ ಇಬ್ಬರು ಮೃತಪಟ್ಟಿದ್ದು, ಸೊಹೇಲ್ ಅನ್ಸಾರಿ (18) ತಲೆಗೆ ಹಾಗೂ ಮೊಹಮ್ಮದ್ ಅನ್ಸಾರಿ (14) ಬೆನ್ನಿಗೆ ಗಾಯಗೊಂಡಿದ್ದಾರೆ. ಇಬ್ಬರನ್ನೂ ಕುರ್ಲಾದ ಪಾಲಿಕೆ ನಿರ್ವಹಣೆಯ ಬಾಬಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಉಪ ಪೊಲೀಸ್ ಆಯುಕ್ತ ಗಣೇಶ್ ಶಿಂದೆ ಮಾಹಿತಿ ನೀಡಿ, ಭಾರಿ ಮಳೆಯಿಂದಾಗಿ ಘಾಟ್ಕೋಪರ್ ಪೊಲೀಸ್ ಠಾಣೆ ವ್ಯಾಪ್ತಿಯ ಅಶೋಕನಗರ ಪ್ರದೇಶದಲ್ಲಿ ಭೂಕುಸಿತ ಸಂಭವಿಸಿದೆ. ಇದುವರೆಗೆ ಎರಡು ಮೃತದೇಹಗಳನ್ನು ಹೊರತೆಗೆಯಲಾಗಿದ್ದು, ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಸ್ಥಳದಲ್ಲಿ ಪೊಲೀಸರು, ಬೃಹನ್ಮುಂಬೈ ಮಹಾನಗರ ಪಾಲಿಕೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಸೇರಿದಂತೆ ವಿವಿಧ ಸಂಸ್ಥೆಗಳ ತಂಡಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆಗಾಗಿ ಮುಂಬೈ ಮೇಯರ್ ರಿತು ತಾವ್ಡೆ ಕೂಡ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಸದ್ಯ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದ್ದು, ಪರಿಸ್ಥಿತಿಯನ್ನು ಅವಲೋಕಿಸಿದ ಬಳಿಕ ಬಾಧಿತ ಪ್ರದೇಶಗಳ ನಿವಾಸಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವ ಕುರಿತು ಸರ್ಕಾರ ನಿರ್ಧಾರ ಕೈಗೊಳ್ಳಲಿದೆ ಎಂದು ರಕ್ಷಣಾ ಕಾರ್ಯಾಚರಣೆಯ ಉಸ್ತುವಾರಿ ಅಧಿಕಾರಿ ಗಜಾನನ ಜೈತಪ್ಕರ್ ತಿಳಿಸಿದ್ದಾರೆ.

ಮುಂಗಾರು ಮಳೆ ಆರಂಭಕ್ಕೂ ಮುನ್ನವೇ ಹಲವು ಮನೆಗಳಿಗೆ ನೋಟಿಸ್ ನೀಡಲಾಗಿತ್ತು. ಸದ್ಯ ರಕ್ಷಣಾ ಕಾರ್ಯಾಚರಣೆಗೆ ಆದ್ಯತೆ ನೀಡಲಾಗಿದ್ದು, ಬಳಿಕ ಮುಂದಿನ ಕ್ರಮದ ಕುರಿತು ನಿರ್ಧಾರ ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

# ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ: ಶಿಕ್ಷಕನಿಗೆ 25 ವರ್ಷ ಜೈಲು

● ವಿಕ್ರಮ ವಾಹಿನಿ । ಕಲಬುರಗಿ

ವರ್ಷದ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಯಡ್ರಾಮಿ ಪಟ್ಟಣದ ಖಾಸಗಿ ಶಾಲೆಯ ಶಿಕ್ಷಕ ಹಾಗೂ ಶಾಲಾ ಕಾರ್ಯದರ್ಶಿ ಹಾಜಿಮಲಂಗ ಗಣಿಯಾರನಿಗೆ ಕಲಬುರಗಿಯ ವಿಶೇಷ ಪೋಕ್ಸೋ ನ್ಯಾಯಾಲಯ 25 ವರ್ಷಗಳ ಜೈಲು ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಿದೆ. ವಿಶೇಷ ಪೋಕ್ಸೋ ನ್ಯಾಯಾಲಯದ ನ್ಯಾಯಾಧೀಶ ಎಸ್. ಎಲ್. ಚವ್ಹಾಣ ಅವರು ಬುಧವಾರ ತೀರ್ಪು ಪ್ರಕಟಿಸಿದ್ದಾರೆ.



ಪೋಕ್ಸೋ ಕಾಯ್ದೆಯ ಕಲಂ 6ರಡಿ ಶಿಕ್ಷೆ ವಿಧಿಸಲಾಗಿದ್ದು, ದಂಡ ಪಾವತಿಸದಿದ್ದರೆ ಹೆಚ್ಚುವರಿ ಆರು ತಿಂಗಳ ಸರಳ ಜೈಲು ಶಿಕ್ಷೆ ಅನುಭವಿಸಬೇಕು ಎಂದು ನ್ಯಾಯಾಲಯ ತಿಳಿಸಿದೆ. ಸಂತ್ರಸ್ತ ಬಾಲಕಿಗೆ ಕಾನೂನು ಪ್ರಾಧಿಕಾರದ ಮೂಲಕ 6 ಲಕ್ಷ ಪರಿಹಾರ ನೀಡುವಂತೆಯೂ ನ್ಯಾಯಾಲಯ ಆದೇಶಿಸಿದೆ.

2024ರ ಮೇ 16ರಂದು ಶಾಲೆಯಲ್ಲಿ ಟ್ಯೂಷನ್‌ಗೆ ತೆರಳಿದ್ದ ಬಾಲಕಿಯನ್ನು ಮೇಲಿನ ಕೋಣೆಗೆ ಕರೆದುಕೊಂಡು ಹೋಗಿ ದೌರ್ಜನ್ಯ ಎಸಗಿದ್ದಾನೆ ಎಂದು ಆರೋಪಿಸಲಾಗಿತ್ತು. ಬಳಿಕ ಬಾಲಕಿಗೆ ಬೆದರಿಕೆ ಹಾಕಿ ಹಲವು ಬಾರಿ ಲೈಂಗಿಕ ದೌರ್ಜನ್ಯ ಎಸಗಿದ್ದಾಗಿ ತನಿಖೆಯಿಂದ ತಿಳಿದುಬಂದಿತ್ತು. ಪರೀಕ್ಷೆಯಲ್ಲಿ ಅನುತ್ತೀರ್ಣಗೊಳಿಸುವುದಾಗಿ ಹಾಗೂ ಜೀವಕ್ಕೆ ಅಪಾಯವಿದೆ ಎಂದು ಬೆದರಿಸಿದ್ದರಿಂದ ಬಾಲಕಿ ಆರಂಭದಲ್ಲಿ ವಿಷಯವನ್ನು ಯಾರಿಗೂ ತಿಳಿಸಿರಲಿಲ್ಲ. ಬಳಿಕ ಶಿಕ್ಷಕಿಯೊಬ್ಬರ ಬಳಿ ಹೇಳಿಕೊಂಡಾಗ ಪ್ರಕರಣ ಬೆಳಕಿಗೆ ಬಂದಿತ್ತು.

ದೌರ್ಜನ್ಯ ನಡೆದ ಕೋಣೆಯಲ್ಲಿ ರಕ್ತದ ಕಲೆಗಳು ಕಂಡುಬಂದಿದ್ದರೂ ಅವುಗಳ ಬಗ್ಗೆ ಆರೋಪಿ ಸುಳ್ಳು ಮಾಹಿತಿ ನೀಡಿದ್ದ. ಬಳಿಕ ಹಾಸಿಗೆಯ ಮೇಲಿದ್ದ ಕಲೆಗಳನ್ನು ಒರೆಸಿ, ಹಾಸಿಗೆಯನ್ನು ಕೆನಾಲ್‌ಗೆ ಎಸೆದು ಸಾಕ್ಷ್ಯ ನಾಶಪಡಿಸಲು ಯತ್ನಿಸಿದ್ದಾನೆ ಎಂದು ತನಿಖೆಯಲ್ಲಿ ದಾಖಲಾಗಿದೆ. ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಹೇಳಿಕೆಗಳು ಸೇರಿದಂತೆ ಹಲವು ಸಾಕ್ಷ್ಯಗಳ ಆಧಾರದ ಮೇಲೆ ಆರೋಪ ಸಾಬೀತಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣ ಬೆಳಕಿಗೆ ಬಂದ ಬಳಿಕ ಯಡ್ರಾಮಿಯಲ್ಲಿ ಭಾರಿ ಜನಾಕ್ರೋಶ ವ್ಯಕ್ತವಾಗಿತ್ತು. ಆರೋಪಿಗೆ ಕಠಿಣ ಶಿಕ್ಷೆ ವಿಧಿಸುವಂತೆ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿ ಯಡ್ರಾಮಿ ಬಂದ್‌ಗೆ ಕರೆ ನೀಡಿದ್ದವು. ಸುಮಾರು ಎರಡು ವರ್ಷಗಳ ಬಳಿಕ ಇದೀಗ ನ್ಯಾಯಾಲಯ ತೀರ್ಪು ಪ್ರಕಟಿಸಿದೆ.

ಪ್ರಕರಣದ ತನಿಖೆ ನಡೆಸಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದ ಪೊಲೀಸ್ ಅಧಿಕಾರಿಗಳು ಹಾಗೂ ನ್ಯಾಯಾಲಯದಲ್ಲಿ ಸಾಕ್ಷಿದಾರರನ್ನು ಸಕಾಲಕ್ಕೆ ಹಾಜರುಪಡಿಸಿದ ಸಿಬ್ಬಂದಿಯ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆಡೂರು ಶ್ರೀನಿವಾಸಲು ಶ್ಲಾಘಿಸಿದ್ದಾರೆ.

# ತಂಬಾಕು ಉತ್ಪನ್ನಗಳಿಗೆ ರಾಜ್ಯದಲ್ಲಿ ಬ್ರೇಕ್



● ವಿಕ್ರಮ ವಾಹಿನಿ । ಬೆಂಗಳೂರು

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ತಂಬಾಕು ಹಾಗೂ ನಿಕೋಟಿನ್ ಹೊಂದಿರುವ ಗುಟ್ಕಾ, ಪಾನ್‌ಮಸಾಲ ಸೇರಿದಂತೆ ನಿಷೇಧಿತ ಉತ್ಪನ್ನಗಳ ತಯಾರಿಕೆ, ಸಂಗ್ರಹಣೆ, ಸಾಗಣೆ, ವಿತರಣೆ ಮತ್ತು ಮಾರಾಟವನ್ನು ರಾಜ್ಯಾದ್ಯಂತ ನಿಷೇಧಿಸಿ ಆದೇಶ ಹೊರಡಿಸಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006ರ ನಿಯಮಗಳಡಿ ಈ ಕ್ರಮ ಕೈಗೊಳ್ಳಲಾಗಿದ್ದು, ಆಗಸ್ಟ್ 10ರಂದು ಅಧಿಸೂಚನೆ ಹೊರಡಿಸಲಾಗಿದೆ. ಅಧಿಸೂಚನೆ ಜಾರಿಯಾದ ದಿನದಿಂದ ಒಂದು ವರ್ಷದವರೆಗೆ ನಿಷೇಧ ಅನ್ವಯವಾಗಲಿದೆ.

ನಿಷೇಧ ಜಾರಿಗೊಳಿಸಲು ಆಹಾರ ಸುರಕ್ಷತಾ ಅಧಿಕಾರಿಗಳ ನೇತೃತ್ವದಲ್ಲಿ ರಾಜ್ಯಾದ್ಯಂತ ವಿಶೇಷ ತಪಾಸಣೆ ಹಾಗೂ ದಾಳಿ ಕಾರ್ಯಾಚರಣೆ ಆರಂಭಿಸಲಾಗಿದೆ. ನಿಷೇಧಿತ ಉತ್ಪನ್ನಗಳ ಮಾರಾಟ ಅಥವಾ ಸಂಗ್ರಹಣೆ ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸರ್ಕಾರ ಎಚ್ಚರಿಸಿದೆ. ನಿಷೇಧಿತ ತಂಬಾಕು ಅಥವಾ ನಿಕೋಟಿನ್ ಉತ್ಪನ್ನಗಳ ತಯಾರಿಕೆ, ಸಂಗ್ರಹಣೆ ಅಥವಾ ಮಾರಾಟ ಕಂಡುಬಂದರೆ ಸಾರ್ವಜನಿಕರು ಕೂಡಲೇ ಸಂಬಂಧಪಟ್ಟ ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಮನವಿ ಮಾಡಿದೆ.

# ಯುಎಪಿಎ ಕೋರ್ಟ್‌ಗೆ ಸೌಲಭ್ಯ ನೀಡಿ

**ವರ್ಷಗಟ್ಟಲೆ ಬಾಕಿ ಉಳಿದಿರುವ ಯುಎಪಿಎ ಪ್ರಕರಣಗಳ ತ್ವರಿತ ವಿಚಾರಣೆಗೆ ಕರ್ನಾಟಕ ಸರ್ಕಾರ ವಿಶೇಷ ನ್ಯಾಯಾಲಯಗಳಿಗೆ ಅಗತ್ಯ ಸಿಬ್ಬಂದಿ ಹಾಗೂ ಮೂಲಸೌಕರ್ಯ ಕಲ್ಪಿಸಬೇಕು ಎಂದು ಸುಪ್ರೀಂ ಕೋರ್ಟ್ ಸೂಚಿಸಿದೆ. ಎರಡು ವಾರಗಳಲ್ಲಿ ಸೌಲಭ್ಯ ಒದಗಿಸುವಂತೆ ಆದೇಶಿಸಿದ ನ್ಯಾಯಪೀಠ, ಶಾಹಿದ್ ಖಾನ್ ಪ್ರಕರಣದ ಪ್ರಮುಖ ಸಾಕ್ಷಿಗಳ ವಿಚಾರಣೆಯನ್ನು ಮೂರು ತಿಂಗಳಲ್ಲಿ ಪೂರ್ಣಗೊಳಿಸಲು ನಿರ್ದೇಶಿಸಿದೆ.**

● ವಿಕ್ರಮ ವಾಹಿನಿ । ನವದೆಹಲಿ

ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ) ಅಡಿ ದಾಖಲಾಗಿರುವ ಪ್ರಕರಣಗಳ ವಿಚಾರಣೆ ವರ್ಷಗಟ್ಟಲೆ ವಿಳಂಬವಾಗದಂತೆ ಅಗತ್ಯ ಸೌಲಭ್ಯ ಕಲ್ಪಿಸುವಂತೆ ಕರ್ನಾಟಕ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಬುಧವಾರ ನಿರ್ದೇಶನ ನೀಡಿದೆ.

ಪಿಎಫ್‌ಐ ಪಿತೂರಿ ಪ್ರಕರಣದ ಆರೋಪಿ ಶಾಹಿದ್ ಖಾನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಹಾಗೂ ವಿ.ಮೋಹನ್ ಅವರಿದ್ದ ಪೀಠ ಈ ನಿರ್ದೇಶನ ನೀಡಿದೆ. ಪ್ರಕರಣದಲ್ಲಿ ಇನ್ನೂ 707 ಸಾಕ್ಷಿಗಳ ವಿಚಾರಣೆ ಬಾಕಿ ಇದೆ.

ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಯುಎಪಿಎ ವಿಶೇಷ ನ್ಯಾಯಾಲಯಗಳಿಗೆ ಅಗತ್ಯ ಸಿಬ್ಬಂದಿ, ಮೂಲಸೌಕರ್ಯ ಹಾಗೂ ಇತರ ಸೌಲಭ್ಯಗಳನ್ನು ಹೈಕೋರ್ಟ್ ನಿಗದಿಪಡಿಸಿರುವ ಮಾನದಂಡಗಳಿಗೆ ಅನುಗುಣವಾಗಿ ಎರಡು ವಾರಗಳೊಳಗೆ ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಕೋರ್ಟ್ ಸೂಚಿಸಿದೆ. ಅಗತ್ಯ ಸೌಲಭ್ಯ ಕಲ್ಪಿಸಿದ ಬಳಿಕ ಯುಎಪಿಎ ಪ್ರಕರಣಗಳ ದೈನಂದಿನ ವಿಚಾರಣೆಗಾಗಿ ಪ್ರತ್ಯೇಕ ನ್ಯಾಯಾಧೀಶರನ್ನು ನಿಯೋಜಿಸುವಂತೆ ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗೆ ನಿರ್ದೇಶನ ನೀಡಿದೆ.

ಶಾಹಿದ್ ಖಾನ್ ಪ್ರಕರಣವನ್ನು ವಿಶೇಷ ನ್ಯಾಯಾಲಯಕ್ಕೆ ವರ್ಗಾಯಿಸುವಂತೆ ಸೂಚಿಸಿದ ಸುಪ್ರೀಂ ಕೋರ್ಟ್, ಮೊದಲು ಮೂವರು ಸಂರಕ್ಷಿತ ಸಾಕ್ಷಿಗಳು ಹಾಗೂ ಬಳಿಕ ಇತರ ಪ್ರಮುಖ ಸಾಕ್ಷಿಗಳ ವಿಚಾರಣೆಯನ್ನು ಗರಿಷ್ಠ ಮೂರು ತಿಂಗಳೊಳಗೆ ಪೂರ್ಣಗೊಳಿಸುವಂತೆ ತಿಳಿಸಿದೆ. ಪ್ರಮುಖ ಸಾಕ್ಷಿಗಳ ವಿಚಾರಣೆ ಮುಗಿದ ಬಳಿಕ ಅರ್ಜಿದಾರರು ಹೊಸದಾಗಿ ಜಾಮೀನು ಕೋರಿ ಅರ್ಜಿ ಸಲ್ಲಿಸಬಹುದು ಎಂದು ಪೀಠ ಸ್ಪಷ್ಟಪಡಿಸಿದೆ. ಪ್ರಸ್ತುತ ರಾಜ್ಯದ ವಿಶೇಷ ನ್ಯಾಯಾಲಯದಲ್ಲಿ ಸುಮಾರು 97 ಯುಎಪಿಎ ಪ್ರಕರಣಗಳು ಬಾಕಿ ಉಳಿದಿವೆ ಎಂದು ರಾಜ್ಯ ಸರ್ಕಾರ ನ್ಯಾಯಾಲಯಕ್ಕೆ ತಿಳಿಸಿತು. ಆರೋಪಿಗಳು ಪದೇಪದೇ ಮಧ್ಯಂತರ ಜಾಮೀನು ಅರ್ಜಿ ಸಲ್ಲಿಸುತ್ತಿರುವುದರಿಂದ ನ್ಯಾಯಾಂಗದ ಸಮಯ ವ್ಯಯವಾಗುತ್ತಿದೆ ಎಂದೂ ಸರ್ಕಾರ ಹೇಳಿತು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಾಲಯ, ರಾಜ್ಯದಲ್ಲಿ ಯುಎಪಿಎ ಪ್ರಕರಣಗಳ ವಿಚಾರಣೆಗಾಗಿ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದ್ದು, ಪ್ರತಿ ನ್ಯಾಯಾಲಯವು ಸುಮಾರು 12ರಿಂದ 15 ಪ್ರಕರಣಗಳನ್ನು ನಿರ್ವಹಿಸಬಹುದಾಗಿದೆ ಎಂದು ತಿಳಿಸಿತು.



ಶಾಹಿದ್ ಖಾನ್ ಪರ ಹಿರಿಯ ವಕೀಲ ಆದಿತ್ಯ ಸೋಂಧಿ, ತಮ್ಮ ಕಕ್ಷಿದಾರರು ಸುಮಾರು ನಾಲ್ಕು ವರ್ಷಗಳಿಂದ ಜೈಲಿನಲ್ಲಿದ್ದು, ಪ್ರಕರಣದ ಇತರ ಒಂಬತ್ತು ಆರೋಪಿಗಳಿಗೆ ಈಗಾಗಲೇ ಜಾಮೀನು ದೊರೆತಿದೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು. ಸಂವಿಧಾನದ 21ನೇ ವಿಧಿಯಡಿ ತ್ವರಿತ ವಿಚಾರಣೆಯ ಹಕ್ಕನ್ನು ಪರಿಗಣಿಸುವಂತೆ ಅವರು ಮನವಿ ಮಾಡಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 137,